# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 160 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 08–01–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 160 | Title- Code: KARKAN 28269 | Chitradurga | Date: 08-01-2024 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಬರ ನಿರ್ವಹಣೆಗೆ ಸಮರೋಪಾದಿಯಲ್ಲಿ ಸಿದ್ಧತೆ: ಸಚಿವ ಸುಧಾಕರ್ 2

ವರ್ತಮಾನದ ಹೊಸ ಕಾನೂನುಗಳನ್ನು ಸವಾಲಾಗಿ ಸ್ವೀಕರಿಸಿ: ಅರವಿಂದ್ ಕಾಮತ್ 3

ಇಂದಿನಿಂದಲೇ ಅಭ್ಯಾಸ ಮಾಡಿ ಉತ್ತಮ ಅಂಕ ಪಡೆಯಿರಿ: ಶಾಸಕ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಗುಲಾಬಿ ಗಿಡದಲ್ಲಿ ಮುಳ್ಳುಗಳಿವೆ ಎಂದು ಭಾವಿಸುವ ಬದಲು ಮುಳ್ಳುಗಳಿರುವ ಗಿಡದ ತುಂಬ ಗುಲಾಬಿಗಳಿವೆ ಎಂದು ಭಾವಿಸಿದರೆ ಅದು ನೀಡುವ ಅನುಭವವೇ ಬೇರೆ ಸಕಾರಾತ್ಮಕ ದೃಷ್ಟಿಕೋನ ಮುಖ್ಯ

» ಶುಭೋದಯ

# ಭಕ್ತರು ಎಲ್ಲಿಯವರೆಗೂ ನನ್ನನ್ನು ಇಷ್ಟಪಡುತ್ತಾರೋ ಅಲ್ಲಿಯತನಕ ನಾನು ಸ್ವಾಮೀಜಿ: ಮಾಚಿದೇವ ಶ್ರೀ

» ಚಿತ್ರದುರ್ಗ

ಭಕ್ತರು ಎಲ್ಲಿಯವರೆಗೂ ನನ್ನನ್ನು ಇಷ್ಟಪಡುತ್ತಾರೋ ಅಲ್ಲಿಯತನಕ ನಾನು ಸ್ವಾಮೀಜಿಯಾಗಿರುತ್ತೇನೆ. ಈಗಾಗಲೆ ರಾಜ್ಯಾದ್ಯಂತ ಸುತ್ತಾಡಿದ್ದೇನೆ. ನನಗೂ ವಯಸ್ಸು ಹಾಗೂ ಆರೋಗ್ಯದ ಸಮಸ್ಯೆ ಕಾಡಬಹುದು. ಹಾಗಾಗಿ ಯಾರಾದರೂ ಭಕ್ತರು ತಮ್ಮ ಮಕ್ಕಳನ್ನು ಮಠಕ್ಕೆ ನೀಡಿದರೆ ಉತ್ತರಾಧಿಕಾರಿಯನ್ನಾಗಿ ಮಾಡಲಾಗುವುದೆಂದು ಮಾಚಿದೇವ ಮಹಾಸಂಸ್ಥಾನ ಮಠ ಮಡಿವಾಳ ಗುರುಪೀಠದ ಡಾ.ಬಸವ ಮಾಚಿದೇವ ಮಹಾಸ್ವಾಮೀಜಿ ಭಿನ್ನವಿಸಿಕೊಂಡರು.




ನಗರದ ಹೊರವಲಯ ದಾವಣಗೆರೆ ರಸ್ತೆಯಲ್ಲಿರುವ ಮಡಿವಾಳ ಗುರುಪೀಠದಲ್ಲಿ ಶನಿವಾರ ನಡೆದ ಶ್ರೀಮಠದ ಶಂಕುಸ್ಥಾಪನೆ ಹದಿನೈದನೆ ವಾರ್ಷಿಕೋತ್ಸವ, ಜಂಗಮದೀಕ್ಷೆಯ 25 ನೇ ವರ್ಷ ಹಾಗೂ 40 ನೇ ಜನ್ಮದಿನದ ವಾರ್ಷಿಕೋತ್ಸವದ ಅಂಗವಾಗಿ ನಡೆದ ಕಾರ್ಯಕ ಜನೋತ್ಸವ–2024 ರ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು.

ಶರಣರು, ಸಂತರು ಆದರ್ಶವಾಗಿ ಬದುಕಿದವರು. ತತ್ವ ಸಿದ್ದಾಂತಗಳಿಗಾಗಿ ಬದುಕನ್ನೇ ಮುಡುಪಾಗಿಟ್ಟವರು. ಮಡಿವಾಳ ಜನಾಂಗ ಆರ್ಥಿಕ, ಸಾಮಾಜಿಕ, ಶೈಕ್ಷಣಿಕವಾಗಿ ಸಮಾಜದ ಮುಖ್ಯ ವಾಹಿನಿಗೆ ಬರಬೇಕು. ಸಮುದಾಯದ ಸಂಘಟನೆಗಾಗಿ ನಿರಂತರ ಶ್ರಮಿಸುತ್ತಿದ್ದೇನೆ. 2009 ರಲ್ಲಿ ಮಠಕ್ಕೆ ಶಂಕುಸ್ಥಾಪನೆಯಾಯಿತು. ಎಲ್ಲಾ ಸಮುದಾಯಕ್ಕೂ ಒಬ್ಬ ಸ್ವಾಮೀಜಿಯನ್ನು ನೇಮಿಸಬೇಕೆಂಬ ಮಹದಾಸೆಯಿಂದ ಮುರುಘಾಮಠದ ಶರಣರು ನನ್ನನ್ನು ಮಡಿವಾಳ ಜನಾಂಗದ ಸ್ವಾಮೀಜಿಯನ್ನಾಗಿ ನೇಮಕ ಮಾಡಿದರು ಎಂದು ಸ್ಮರಿಸಿದರು.

ಪ್ರತಿ ವರ್ಷ ಜ.6 ರಂದು ಮಠದಲ್ಲಿ ಕಾಯಕ ಜನೋತ್ಸವ ನಡೆಯುತ್ತದೆ. ಈ ವರ್ಷ ಬರಗಾಲವಿರುವುದರಿಂದ ಸರಳವಾಗಿ ಆಚರಿಸಲು ತೀರ್ಮಾನಿಸಿದೆವು. ನಾವು ಯಾರನ್ನು ಆಹ್ವಾನಿಸುವುದಿಲ್ಲ. ಮಠ ನಿಮ್ಮದು ಎಂದು ತಿಳಿದುಕೊಂಡು ಪ್ರತಿ ವರ್ಷವೂ ಬರಬೇಕು. ಭಕ್ತರಿಗೆ ಯಾವುದೇ ರೀತಿಯಲ್ಲಿ ಚ್ಯುತಿ ಬಾರದಂತೆ ಜವಾಬ್ದಾರಿ ನಿಭಾಯಿಸುತ್ತೇನೆ. ಮುಂದಿನ ದಿನಗಳಲ್ಲಿ ಉತ್ತರಾಧಿಕಾರಿಯನ್ನು ನೇಮಕ ಮಾಡೋಣ. ಸಭಾಂಗಣದ ಮೇಲೆ ನಾಲ್ಕು ಸಾವಿರ ಜನ ಕುಳಿತುಕೊಳ್ಳುವಷ್ಟು ವಿಶಾಲವಾದ ಹಾಲ್ ನಿರ್ಮಾಣ ಮಾಡಲಾಗುವುದು. ಭಕ್ತಾದಿಗಳು ತನು, ಮನ, ಧನವನ್ನು ನೀಡಿ ಮಠದ ಅಭಿವೃದ್ದಿಗೆ ಕೈಜೋಡಿಸುವಂತೆ ಸ್ವಾಮೀಜಿ ಮನವಿ ಮಾಡಿದರು.ಯಡಿಯೂರ ಮೂಡಲಗಿರಿ ಮಾತನಾಡಿ ಹನ್ನೆರಡನೆ ಶತಮಾನದ ಮಡಿವಾಳ ಮಾಚಿದೇವರ ವಚನಗಳನ್ನು ಇಂದಿನ ಪೀಳಿಗೆಗೆ ಅಭ್ಯಾಸ ಮಾಡಿಸಬೇಕು. ಮಡಿವಾಳ ಜನಾಂಗ ಎನ್ನುವ ಕಾರಣಕ್ಕಾಗಿ ನಮ್ಮನ್ನು ಬೇರೆಯವರು ನಿರ್ಲಕ್ಷ್ಯೆಯಿಂದ ಕಾಣುವಂತಾಗಿದೆ. ಅದಕ್ಕಾಗಿ ಎಷ್ಟೆ ಕಷ್ಟವಿರಲಿ ಮಕ್ಕಳನ್ನು ಶಿಕ್ಷಣವಂತರನ್ನಾಗಿ ಮಾಡುವ ಹೊಣೆಗಾರಿಕೆ ಪೋಷಕರುಗಳ ಮೇಲಿದೆ. ಶಿಕ್ಷಣದಿಂದ ಮಾತ್ರ ಕೀಳರಿಮೆಯಿಂದ ಮಡಿವಾಳ ಜನಾಂಗ ಹೊರಬರಲು ಸಾಧ್ಯ ಎಂದು ಹೇಳಿದರು.

ಮಾಚಿದೇವರ 900 ವಚನಗಳಿವೆ. ಅವುಗಳನ್ನು ಎಲ್ಲರೂ ಕಂಠ ಪಾಠ ಮಾಡಬೇಕಿದೆ ಅದುವೆ ಮಡಿವಾಳ ಮಾಚಿದೇವರಿಗೆ ನಮ್ಮ ಜನಾಂಗ ಸಲ್ಲಿಸುವ ನಿಜವಾದ ಭಕ್ತಿ ಎಂದರು.

ಎಂ.ಕೆ.ಹನುಮಂತಪ್ಪ, ಫಕೀರಪ್ಪ, ಡಾ.ಸಂಗಮೇಶ್ ಕಳಾಲ್, ನಿಜಲಿಂಗಪ್ಪ, ಶ್ರೀಮತಿ ಮಂಜುಳಮ್ಮ, ಮಧು ಶಾಮನೂರ್, ಮಡಿವಾಳ ಸಮಾಜದ ಜಿಲ್ಲಾಧ್ಯಕ್ಷ ಬಿ.ರಾಮಪ್ಪ, ಮಡಿವಾಳ ಸಮಾಜದ ಮುಖಂಡರುಗಳಾದ ಶಿವಲಿಂಗಪ್ಪ, ಕೆ.ಆರ್.ಮಂಜುನಾಥ್ ಇನ್ನು ಅನೇಕರು ವೇದಿಕೆಯಲ್ಲಿದ್ದರು.

ಗಂಗಾಧರ್ ಮತ್ತು ತಂಡದವರು ಪ್ರಾರ್ಥಿಸಿದರು. ವಕೀಲ ಸಿದ್ದನಕೊಪ್ಪಲು ಕುಮಾರ್ ಸ್ವಾಗತಿಸಿದರು. ಮಡಿವಾಳ ಸಮಾಜದ ಜಿಲ್ಲಾ ಗೌರವಾಧ್ಯಕ್ಷ ಡಾ.ವಿ.ಬಸವರಾಜ್ ನಿರೂಪಿಸಿದರು.

## ಅಂಬೇಡಕರ್ 20ನೇ ಶತಮಾನದ ಅವತಾರ ಪುರುಷ

» ನಾಯಕನಹಟ್ಟಿ

ಐದನೇ ಶತಮಾನದಲ್ಲಿ ಬುದ್ಧ, 12ನೇ ಶತಮಾನದಲ್ಲಿ ಬಸವಣ್ಣ, 20ನೇ ಶತಮಾನದಲ್ಲಿ ಅಂಬೇಡ್ಕರಾಗಿ ಅವತಾರ ಪುರುಷರಾಗಿ ಡಾ. ಡಿ ಆರ್ ಅಂಬೇಡ್ಕರ್ ರವರು ಹುಟ್ಟುತ್ತಾರೆ ಎಂದು ಚಳ್ಳಕೆರೆ ಕ್ಷೇತ್ರದ ಶಾಸಕ ಟಿ ರಘುಮೂರ್ತಿ ರವರು ಮಾತನಾಡಿದರು.



ತುರುವನೂರು ಹೋಬಳಿ ಕೂನಬೇವು ಗ್ರಾಮದಲ್ಲಿ ಶ್ರೀ ಸಿದ್ಧಾರೂಢ ಮಠದ ಶ್ರೀ ಶ್ರೀ ಶ್ರೀ ಮಹಾಲಿಂಗಪ್ಪ ಸ್ವಾಮಿಗಳ ಉಪಸ್ಥಿತಿಯಲ್ಲಿ,ಡಾ. ಬಿ ಆರ್ ಅಂಬೇಡ್ಕರ್ ಯುವಕರ ಸಂಘದ ವತಿಯಿಂದ ಆಯೋಜಿಸಿದ ಬಾಬಾ ಸಾಹೇಬ್ ಅಂಬೇಡ್ಕರ್ ರವರ ಭಾವಚಿತ್ರ ಅನಾವರಣ ಗೊಳಿಸಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಶಾಸಕ ಟಿ ರಘುಮೂರ್ತಿ ರವರು ಮಾತನಾಡಿ ಐದನೇ ಶತಮಾನದಲ್ಲಿ ಬುದ್ಧರಾಗಿ, 12ನೇ ಶತಮಾನದಲ್ಲಿ ಬಸವಣ್ಣನವರಾಗಿ, 20ನೇ ಶತಮಾನದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರಾಗಿ ಅವತಾರವನೆತ್ತಿ ಜನ್ಮ ತಾಳಿ ಈ ದೇಶದ ಶೋಷಿತ ವರ್ಗಗಳಾದ ಎಸ್ ಸಿ, ಎಸ್ ಟಿ, ಓಬಿಸಿ ಸಮುದಾಯದವರಿಗೆ ಸ್ವಾತಂತ್ರ್ಯ ಸಮಾನತೆಮತ್ತುರಾಜಕೀಯವಾಗಿ,ಶೈಕ್ಷಣಿಕವಾಗಿ, ಸಾಮಾಜಿಕವಾಗಿ, ಆರ್ಥಿಕವಾಗಿ, ಮೀಸಲಾತಿ ಯನ್ನು ತಂದುಕೊಟ್ಟಿದ್ದಾರೆ ಎಂದರು.

ವೇದಿಕೆಯಲ್ಲಿ ಜೆಜೆ ಹಟ್ಟಿಯ ಡಾ. ಬಿ ತಿಪ್ಪೇಸ್ವಾಮಿ, ಲಿಡ್ಕರ್ ಸಂಸ್ಥೆಯ ಮಾಜಿ ಅಧ್ಯಕ್ಷ ಡಿ ಶಂಕರ್, ಚೌಳೂರು ಪ್ರಕಾಶ್, ತುರುವನೂರು ಗ್ರಾಮದ ಡಿ ಆರ್ ಮಂಜುನಾಥ್, ಐಎಎಸ್ ಮತ್ತು ಐಪಿಎಸ್ ತರಬೇತಿ ಕೇಂದ್ರದ ಮುಖ್ಯಸ್ಥೆ ಅನಿತಾ ಲಕ್ಷ್ಮಿ, ಜಿಲ್ಲಾ ವಕೀಲರ ಸಂಘದ ಮಾಜಿ ಅಧ್ಯಕ್ಷ ಮತ್ತು ಅಭಿಯೋಜಕರಾದ ನ್ಯಾಯವಾದಿ ವಿಜಯ್ ಕುಮಾರ್, ಬಹುಜನ ಸಮಾಜ ಪಕ್ಷದ ಮುಖಂಡರಾದ ಮಹಾಂತೇಶ್, ಪ್ರೌಢಶಾಲಾ ಶಿಕ್ಷಕರಾದ ಸಿದ್ದೇಶ್, ಮಾತನಾಡಿದರು.

ಈ ಸಂದರ್ಭದಲ್ಲಿ ಶಿಕ್ಷಕರಾದ ಆರ್ ತಿಪ್ಪೆಸ್ವಾಮಿ, ಚಂದ್ರಣ್ಣ, ಏಕಾಂತ, ಸರ್ ಯುವಕ ಸಂಘದ ಅಧ್ಯಕ್ಷರಾದ ಗಂಟೆ ಈಶ್ವರ, ಸಂಘದ ಪ್ರಧಾನ ಕಾರ್ಯದರ್ಶಿಯಾದ ಹೇಮಣ್ಣ, ನಾಯಕನಹಟ್ಟಿ ಬಿಟಿ ಶಿವಕುಮಾರ್, ರೇಣುಕಮ್ಮ, ಮಾಜಿ ತಾಲೂಕು ಪಂಚಾಯತ್ ಸದಸ್ಯರಾದ ಸತೀಶ್, ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಕವಿತಾ, ಮಲ್ಲಿಕಾರ್ಜುನಪ್ಪ , ಗ್ರಾಮ ಪಂಚಾಯಿತಿ ಸದಸ್ಯ ಗಂಗಣ್ಣ, ಬೆಳಗಟ್ಟ ತಿಪ್ಪೇಸ್ವಾಮಿ, ಖಾಕಿ ಹನುಮಂತರೆಡ್ಡಿ, ಹುಣ್ಸೆಕಟ್ಟೆ ತಿಪ್ಪೇಸ್ವಾಮಿ, ಗೋಂಚಿಯರ್ ಮಂಜಣ್ಣ, ಗುಡೆಕೋಟೆ ಸೂರಪ್ಪ ಮತ್ತು ಅಂಬೇಡ್ಕರ್ ಯುವಕ ಸಂಘದ ಸದಸ್ಯರು ಹಿರಿಯರು ಮುಖಂಡರು ಮತ್ತಿತರರು ಭಾಗವಹಿಸಿದ್ದರು

## ಗ್ರಾಮೀಣ ಜನರ ಭಕ್ತಿಗೆ ಬೆಲೆ ಕಟ್ಟಲು ಸಾಧ್ಯವಿಲ್ಲ: ಡಿ.ಸುಧಾಕರ್



**ಚಳ್ಳಕೆರೆ:** ತಾಲ್ಲೂಕಿನ ಜಾಜೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮೋದೂರು ಗ್ರಾಮದ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಆಯೋಜಿಸಿದ್ದ ಕಳಸಾರಾಧನ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕಳೆದ ಹಲವಾರು ವರ್ಷಗಳಿಂದ ಗ್ರಾಮದ ಶ್ರೀಆಂಜನೇಯಸ್ವಾಮಿ ದೇವಸ್ಥಾನಕ್ಕೆ ನಾನು ಭೇಟಿ ನೀಡುತ್ತಾ ಬಂದಿದ್ದೇನೆ. ತಾಲ್ಲೂಕಿನ ಯಾವ ಭಾಗದಲ್ಲೂ ನೀರಿನ ಕೊರತೆ ಉಂಟಾದರೂ ಈ ಭಾಗದಲ್ಲಿ ಮಾತ್ರ ಈ ಸ್ಥಿತಿ ನಿರ್ಮಾಣವಾಗುವುದಿಲ್ಲ. ಇದಕ್ಕೆ ಶ್ರೀಆಂಜನೇಯಸ್ವಾಮಿಯ ಆಶೀರ್ವಾದವೇ ಕಾರಣವೆಂದು ನನ್ನ ನಂಬಿಕೆ ಎಂದರು.ಶಾಸಕ ಟಿ.ರಘುಮೂರ್ತಿ ಮಾತನಾಡಿದರು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಹೇಮಂತರಾಜ್, ನಾಗರಾಜು, ಮಂಜುನಾಥ, ರಂಗಪ್ಪ, ಅಂಜನಮೂರ್ತಿ, ರಂಗನಾಥ ಮುಂತಾದವರು ಉಪಸ್ಥಿತರಿದ್ದರು.

### ಪ್ರಮುಖ ಸುದ್ದಿ

# ಹೊಸದುರ್ಗ ಪುರಸಭೆ ಆಯವ್ಯಯ ಸಿದ್ಧತೆ ಸಭೆ

» ಹೊಸದುರ್ಗ

ಕಳೆದ 2023 ನೇ ಸಾಲಿನಲ್ಲೂ ಪುರಸಭೆ ಸ್ವಚ್ಛ ಸರ್ವೇಕ್ಷಣಾ ಪ್ರಶಸ್ತಿಗೆ ಆಯ್ಕೆಯಾಗಿದೆ. ಇನ್ನೂ ಜವಾಬ್ದಾರಿ ಹೆಚ್ಚಿದ್ದು, ಹಲವು ಅಭಿವೃದ್ಧಿ ಕಾರ್ಯ ಮಾಡುತ್ತಾ ಪಟ್ಟಣದ ಸೌಂದರ್ಯಕ್ಕೆ ಆದ್ಯತೆ ನೀಡಿ ಎಂದು ಸಾರ್ವಜನಿಕರು ಪುರಸಭೆ ಮುಖ್ಯಾಧಿಕಾರಿಗೆ ಸಲಹೆ ನೀಡಿದರು.



ನಗರದ ಪುರಸಭೆ ಸಭಾಂಗಣದಲ್ಲಿ ಶನಿವಾರ ಆಯೋಜಿಸಿದ್ದ 'ಬಜೆಟ್ ಪೂರ್ವ ಸಿದ್ಧತೆ' ಸಭೆಯೂ ಸಾರ್ವಜನಿಕರು ಹಾಗೂ ಪುರಸಭೆ ಸದಸ್ಯರ ಸಮ್ಮುಖದಲ್ಲಿ ನಡೆಯಿತು.

ಪಟ್ಟಣದಲ್ಲಿ ಕಳ್ಳತನ ನಿಯಂತ್ರಣ ಆಗಬೇಕು, ಫುಟ್ ಪಾತ್ ನಿರ್ಮಾಣ, ಪುರಸಭೆ ಸಿಬ್ಬಂದಿ ವರ್ಗಕ್ಕೆ ವಸತಿ ಸೌಲಭ್ಯ, ಗಿಡ ಮರ ಬೆಳೆಸಲು ಉತ್ತೇಜನ, ಮಳೆಕೊಯ್ಲು ಕಡ್ಡಾಯ, ಹೊಟೇಲ್ ಗಳ ಕ್ಲೀನಿಂಗ್ ಗೆ ಆದ್ಯತೆ ನೀಡಿ, 20 ಎಕರೆ ಸರ್ಕಾರಿ ಭೂಮಿಯಲ್ಲಿ ಒಂದು ಸುಸಜ್ಜಿತ ಪಾರ್ಕ್ ನಿರ್ಮಾಣ, ಶಾಲೆ ದತ್ತು ಪಡೆದು ಅಭಿವೃದ್ಧಿ, ಹೆಲ್ತ್ ಕೇರ್ ಸೆಂಟರ್ ಪ್ರಾರಂಭ, ಮಂದಿರ ಮಸೀದಿ ಸ್ವಚ್ಛತೆಗೆ ಆದ್ಯತೆ, ಕಸ ವಿಲೇವಾರಿ ಚೆನ್ನಾಗಿ ನಡೆಯುತ್ತಿದ್ದು, ಕೆಲ ಸಣ್ಣ ಪುಟ್ಟ ದೋಷಗಳಿದ್ದು ಅದನ್ನು ಸರಿಪಡಿಸಿಕೊಳ್ಳಿ ಎಂದರು.

ಬಯೋಗ್ಯಾಸ್ ವ್ಯವಸ್ಥೆ, ನಗರದ ಸೌಂದರ್ಯಕ್ಕೆ ಆದ್ಯತೆ, ಹಿಂದೂ ರುದ್ರಭೂಮಿ ಅಭಿವೃದ್ಧಿ, ರಸ್ತೆ ಅಗಲೀಕರಣ, ಬಂಡೆಸಂತೆಯಲ್ಲಿ ಶೌಚಾಲಯ ಸೇರಿದಂತೆ ಹಲವು ಸೌಲಭ್ಯ ಕಲ್ಪಿಸಲು ಒತ್ತಾಯ. ಬೈಪಾಸ್ ರಸ್ತೆ ಹಾಗೂ ರಿಂಗ್ ರೋಡ್ ನಿರ್ಮಿಸಿ, ಆದಷ್ಟೂ ಸಂಚಾರ ದಟ್ಟಣೆ ಕಡಿಮೆಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ಸಭೆಯಲ್ಲಿ ಸಾರ್ವಜನಿಕರು ಮುಖ್ಯಾಧಿಕಾರಿಗಳಿಗೆ ಸಲಹೆ ನೀಡಿದರು.

'ಚಿರತೆ, ನಾಯಿ, ಹಂದಿ, ಕೋತಿಗಳ ಹಾವಳಿಯಿಂದ ತಾಲ್ಲೂಕಿನ ಜನತೆ ತತ್ತರಿಸಿ ಹೋಗಿದ್ದಾರೆ. ಹೊಸದುರ್ಗ ಹಾಗೂ ಹೊಳಲ್ಕೆರೆ ತಾಲ್ಲೂಕುಗಳಿಂದ ಪ್ರಾಣಿ ಸೆರೆಗಾಗಿ ಒಂದು ತಂಡ ಮಾಡಿ. ಪ್ರಾಣಿ ಸೆರೆಗೆ ಮುಂದಾದರೆ, ಜನರಲ್ಲಿ ಆತಂಕ ದೂರವಾಗುತ್ತದೆ. ಪಟ್ಟಣದಲ್ಲಿ ಕಿರು ತರಕಾರಿ ಮಾರುಕಟ್ಟೆ ನಿರ್ಮಾಣವಾಗಿ ವರ್ಷಗಳೇ ಕಳೆದಿವೆ. ಆದರೂ ಬೀದಿ ಬದಿ ವ್ಯಾಪಾರ ಮಾತ್ರ ತಪ್ಪಿಲ್ಲ. ಇದರಿಂದ ವಾಹನ ಹಾಗೂ ಸಾರ್ವಜನಿಕರ ಓಡಾಟಕ್ಕೆ ಅಡಚಣೆಯಾಗಲಿದೆ. ಕೂಡಲೇ ಬೀದಿ ಬದಿ ವ್ಯಾಪಾರಿಗಳನ್ನು ಕಿರು ತರಕಾರಿ ಮಾರುಕಟ್ಟೆಗೆ ಸ್ಥಳಾಂತರಿಸಿ, 6 ತಿಂಗಳವರೆಗೂ ಬಾಡಿಗೆಯಿಂದ ವಿನಾಯಿತಿ ನೀಡಿ ಎಂದು ಪುರಸಭೆ ಸದಸ್ಯ ನಾಗರಾಜ್ ಸಭೆಗೆ ತಿಳಿಸಿದರು.

ಜನರಿಗೆ ಪ್ರತಿಕ್ರಿಯಿಸಿದ ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು, ಸಾರ್ವಜನಿಕರ ಸಲಹೆಗಳನ್ನು ಪಡೆದು, ಬಜೆಟ್ ನಲ್ಲಿ ಪಟ್ಟಣದ ಅಭಿವೃದ್ಧಿಗೆ ಪೂರಕವಾದ ಅಂಶಗಳಿಗೆ ಹಣ ವಿನಿಯೋಗಲಾಗುವುದು. ಹಿಂದೆ ಚುನಾವಣಾ ಕಾರಣದಿಂದ ಕಾಮಗಾರಿ ವಿಳಂಬವಾಗಿದೆ. ಮುಂದಿನ ದಿನಗಳಲ್ಲಿ ಸರಿಯಾಗಿ ನಿರ್ವಹಿಸುವುದಾಗಿ ಭರವಸೆ ನೀಡಿದರು.

ಸಭೆಗೂ ಮುನ್ನ ಸಾರ್ವಜನಿಕರು ಪುರಸಭೆ ಸ್ವಚ್ಛ ಸರ್ವೇಕ್ಷಣಾ ಪ್ರಶಸ್ತಿ ಆಯ್ಕೆಯಾಗಿದ್ದರಿಂದ ಅಭಿನಂದನೆ ಸಲ್ಲಿಸಿದರು

### ಫಾಸ್ಟ್ ನ್ಯೂಸ್

## ೨೦ರಂದು ನವೋದಯ ವಿದ್ಯಾಲಯ ಪ್ರವೇಶ ಪರೀಕ್ಷೆ




» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯ ಜವಾಹರ್ ನವೋದಯ ವಿದ್ಯಾಲಯ 2024–25ನೇ ಸಾಲಿಗೆ ಪ್ರವೇಶ ಪರೀಕ್ಷೆಯು ಇದೇ ಜನವರಿ 20 ಬೆಳಿಗ್ಗ 11ಕ್ಕೆ ಜಿಲ್ಲೆಯ ಆಯಾ ತಾಲ್ಲೂಕಿನಲ್ಲಿ ಪರೀಕ್ಷೇ ಕೇಂದ್ರದಲ್ಲಿ ಪರೀಕ್ಷೆ ನಡೆಯಲಿದೆ.ಪ್ರವೇಶ ಪರೀಕ್ಷೆಗೆ ಅರ್ಜಿ ಸಲ್ಲಿಸಿದವರು https://Cbseitms.rcil.gov.in/nvs/AdminCard?Aspxautodetectcookiesupport=1 ಈ ವೆಬ್‌ಸೈಟ್‌ನಿಂದ ಪ್ರವೇಶ ಪತ್ರಗಳನ್ನು ಡೌನ್ ಲೋಡ್ ಮಾಡಿಕೊಂಡು, ಪ್ರವೇಶ ಪತ್ರದಲ್ಲಿ ನಮೂದಿಸಿದ ಪರೀಕ್ಷಾ ಕೇಂದ್ರಕ್ಕೆ ಸಮಯಕ್ಕೆ ಸರಿಯಾಗಿ ಅಗತ್ಯ ದಾಖಲೆಗಳೊಂದಿಗೆ ಪರೀಕ್ಷೆಗೆ ತಪ್ಪದೇ ಹಾಜರಾಗಬೇಕು ಎಂದು ಹಿರಿಯೂರು ತಾಲ್ಲೂಕು ಉಡುವಳ್ಳಿಯ ಜವಾಹರ್ ನವೋದಯ ವಿದ್ಯಾಲಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುವ ಪರಿವರ್ತಕರು, ಸಮಾಲೋಚಕರ ಆಯ್ಕೆ: ಅರ್ಜಿ ಆಹ್ವಾನ

» ಚಿತ್ರದುರ್ಗ

ಬೆಂಗಳೂರು ನಿಮಾನ್ಸ್ ಎಪಿಡೀಮಿಯಾಲಜಿ ಜನ ಆರೋಗ್ಯ ಕೇಂದ್ರ ಹಾಗೂ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಅನುಷ್ಠಾನಗೊಂಡಿರುವ ಯುವ ಸ್ಪಂದನ ಕಾರ್ಯಕ್ರಮದಡಿಯಲ್ಲಿ ಕಾರ್ಯನಿರ್ವಹಿಸಲು ಹೊಸದಾಗಿ ಯುವ ಪರಿವರ್ತಕರು ಹಾಗೂ ಯುವ ಸಮಾಲೋಚಕರನ್ನು ಆಯ್ಕೆ ಮಾಡಿಕೊಂಡು ಅವರನ್ನು ಕಾರ್ಯಕ್ರಮದ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕಿದೆ. ಇದರ ಸಂಬಂಧ ಯುವ ಪರಿವರ್ತಕರನ್ನು ಹಾಗೂ ಯುವ ಸಮಾಲೋಚಕರನ್ನು ಆಯ್ಕೆ ಮಾಡಲು ಇದೇ ಜನವರಿ 6 ರಿಂದ 12 ರವರೆಗೆ ಅರ್ಜಿ ಆಹ್ವಾನಿಸಲಾಗಿದೆ. ಯುವ ಪರಿವರ್ತಕರನ್ನು ಪ್ರತಿ ಜಿಲ್ಲೆಗೆ 3 ಪುರುಷ ಹಾಗೂ 2 ಮಹಿಳೆ ಸೇರಿದಂತೆ ಒಟ್ಟು 5 ಜನರನ್ನು ಆಯ್ಕೆ ಮಾಡಲಾಗುವುದು. ಈ ಯೋಜನೆಗೆ ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಯಾವುದೇ ಪದವಿ ಹಾಗೂ ಮೇಲ್ಪಟ್ಟವರು ಮಾತ್ರ ಅರ್ಜಿ ಸಲ್ಲಿಸತಕ್ಕದ್ದು. ಸಮುದಾಯದಲ್ಲಿ ಕೆಲಸ ಮಾಡಿರುವವರನ್ನು ಅಪೇಕ್ಷಿಸಲಾಗಿದೆ.ಸಮುದಾಯದಲ್ಲಿ ಕೆಲಸ ಮಾಡಲು ಆಸಕ್ತಿ ಮತ್ತು ಉತ್ತಮ ಸಂವಹನ ಕೌಶಲ್ಯ, ಸ್ಪಷ್ಟವಾದ ಕನ್ನಡ ಉಚ್ಚಾರಣೆ ಹಾಗೂ ಕನಿಷ್ಠ ವಯಸ್ಸು 21 ರಿಂದ 35 ವರ್ಷಗಳು ಇರಬೇಕು. ಯುವ ಪರಿವರ್ತಕರಿಗೆ ಗೌರವ ಧನವಾಗಿ ತಿಂಗಳಿಗೆ ರೂ.6000/– ನೀಡಲಾಗುವುದು. ಪ್ರತಿ ಜಿಲ್ಲೆಗೆ ಓರ್ವ ಯುವ ಸಮಾಲೋಚಕರನ್ನು ಆಯ್ಕೆ ಮಾಡಲಾಗುವುದು. ಯುವ ಸಮಾಲೋಚಕರಿಗೆ ಶೈಕ್ಷಣಿಕ ಅರ್ಹತೆ ಪದವಿ )ಸೈಕಾಲಜಿ, ಸೋಷಿಯಲ್ ವರ್ಕ್ ಪದವಿ ತೇರ್ಗಡೆಯಾದವರಿಗೆ ಆದ್ಯತೆ ನೀಡಲಾಗುವುದು. ಆಪ್ತ ಸಮಾಲೋಚನೆಯನ್ನು ಒದಗಿಸುವ ಕೌಶಲ್ಯ ಸಮುದಾಯದಲ್ಲಿ ಕೆಲಸ ಮಾಡಲು ಆಸಕ್ತಿ ಉತ್ತಮ ಸಂವಹನ ಕೌಶಲ್ಯ, ಸ್ಪಷ್ಟವಾದ ಕನ್ನಡ ಉಚ್ಚಾರಣೆ ಹಾಗೂ ಕನಿಷ್ಠ 21 ರಿಂದ 35 ವರ್ಷಗಳ ಒಳಗೆ ಇರಬೇಕು. ಯುವ ಸಮಲೋಚಕರಿಗೆ ಗೌರವಧನವಾಗಿ ತಿಂಗಳಿಗೆ ರೂ.9000/–ನೀಡಲಾಗುವುದು.ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ 08194–235635ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5800 |
| 85 ಕೆಡಿಎಂ (ಗ್ರಾಂ) | 5400 |



| ಬೆಳ್ಳಿ ಬೆಲೆ | |
|---|---|
| ಕೆಜಿ | 66000 |



## ಫಾಸ್ಟ್ ನ್ಯೂಸ್

### 9ಕ್ಕೆ ಕಡೇ ಕಾರ್ತಿಕ



» **ದಾವಣಗೆರೆ**

ನಗರದ ಶ್ರೀ ಕಾಳಿಕಾದೇವಿ ರಸ್ತೆಯಲ್ಲಿರುವ ಶ್ರೀ ಕಾಳಿಕಾದೇವಿ ವಿಶ್ವಕರ್ಮ ದೇವಸ್ಥಾನದಲ್ಲಿ 9 ರಂದ ಕಾಳಿಕಾ ದೇವಿಯ ಕಡೇ ಕಾರ್ತಿಕೋತ್ಸವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಅಂದು ಬೆಳಿಗ್ಗೆ ಪ್ರಾತಃ ಕಾಲದಲ್ಲಿ ಶ್ರೀ ಅಮ್ಮನವರಿಗೆ ವೇದೋಕ್ತ ಪಂಚಾಮೃತ ಅಭಿಷೇಕ, ವಿಶ್ವಕರ್ಮ ಅಷ್ಟೋತ್ತರ ಪೂಜೆ, ಪುಷ್ಪಾಲಂಕಾರ, ವಿಶೇಷ ಪೂಜಾ ಅಲಂಕಾರ, ಮಹಾಮಂಗಳಾರತಿ ಕಾರ್ಯಕ್ರಮ ನಡೆಯಲಿವೆ. ರಾತ್ರಿ 8 ಗಂಟೆಗೆ ದೀಪಾರಾಧನೆ, ಕಡೇ ಕಾರ್ತಿಕೋತ್ಸವವನ್ನು ಹಮ್ಮಿಕೊಳ್ಳಲಾಗಿದೆ. ಸರ್ವಭಕ್ತಾದಿಗಳು, ಸಮಾಜ ಭಾಂದವರು ಭಾಗವಹಿಸಿ, ಶ್ರೀ ದೇವಿಯ ಕೃಪೆಗೆ ಪಾತ್ರರಾಗ ಬೇಕೆಂದು ದೇವಸ್ಥಾನ ಆಡಳಿತ ಸಮಿತಿ ಟ್ರಸ್ಟ್ ಕೋರಿದೆ.

### ವಿವಿಧ ಯೋಜನೆಗಳಡಿ ಸೌಲಭ್ಯ ಪಡೆಯಲು ವಿಕಲಚೇತನರಿಂದ ಅರ್ಜಿ

» **ಚಿತ್ರದುರ್ಗ**

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ 2023–24ನೇ ಸಾಲಿನ ಐದು ಫಲಾನುಭವಿ ಆಧಾರಿತ ಯೋಜನೆಗಳಡಿ ವಿವಿಧ ಸೌಲಭ್ಯ ಪಡೆಯಲು ಜಿಲ್ಲೆಯ ವಿಕಲಚೇತನರಿಂದ ಆನ್‌ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ. ಅರ್ಜಿಗಳನ್ನು ಸೇವಾಸಿಂಧು ಡಿ.ಬಿ.ಟಿ (ನೇರ ನಗದು ವರ್ಗಾವಣೆ) ಆ[illegible]ಲೈನ್ ವೇದಿಕೆ ತಂತ್ರಾಂಶದಡಿ ಅಳವಡಿಸಲಾಗಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಜನವರಿ 30 ಕೊನೆಯ ದಿನ.ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್ ಟಾಪ್ ಯೋಜನೆ: ಈ ಯೋಜನೆಗೆ ಯುಡಿಐಡಿ ಕಾರ್ಡ್, ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಶಾಲಾ/ಕಾಲೇಜು ದೃಢೀಕರಣ ಪತ್ರ, ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಚಾಲ್ತಿಯಲ್ಲಿರುವ ವಾಸಸ್ಥಳ ಪ್ರಮಾಣ ಪತ್ರ, ಪಡಿತರ ಚೀಟಿ, ಭಾವಚಿತ್ರ, ರೂ.20 ಬಾಂಡ್‌ನಲ್ಲಿ ನಿರಪೇಕ್ಷಣಾ ಪ್ರಮಾಣ ಪತ್ರದ ಅಗತ್ಯವಿದೆ. ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ ಯೋಜನೆ: ಯುಡಿಐಡಿ ಕಾರ್ಡ್, ಚಾಲ್ತಿಯಲ್ಲಿರುವ ಎಲ್.ಎಲ್.ಆರ್./ಡಿ.ಎಲ್ ಪ್ರಮಾಣ ಪತ್ರ, ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಚಾಲ್ತಿಯಲ್ಲಿರುವ ವಾಸಸ್ಥಳ ಪ್ರಮಾಣ ಪತ್ರ, ಪಡಿತರ ಚೀಟಿ, ಭಾವಚಿತ್ರ, ರೂ.20 ಬಾಂಡ್‌ನಲ್ಲಿ ನಿರಪೇಕ್ಷಣಾ ಪ್ರಮಾಣ ಪತ್ರ, ಕೆಲಸ/ಶೈಕ್ಷಣಿಕ ಪ್ರಮಾಣ ಪತ್ರದ ಅಗತ್ಯವಿದೆ. ಸಾಧನೆ ಸಲಕರಣೆ ಯೋಜನೆ: ಯುಡಿಐಡಿ ಕಾರ್ಡ್, ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಚಾಲ್ತಿಯಲ್ಲಿರುವ ವಾಸಸ್ಥಳ ಪ್ರಮಾಣ ಪತ್ರ, ಪಡಿತರ ಚೀಟಿ, ಭಾವಚಿತ್ರ ಹೊಂದಿರಬೇಕು.ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ: ಯುಡಿಐಡಿ ಕಾರ್ಡ್, ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಶಾಲಾ/ಕಾಲೇಜು ದೃಢೀಕರಣ ಪತ್ರ, ಟೈಲರಿಂಗ್ ತರಬೇತಿ ಪ್ರಮಾಣ ಪತ್ರ, ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಚಾಲ್ತಿಯಲ್ಲಿರುವ ವಾಸಸ್ಥಳ ಪ್ರಮಾಣ ಪತ್ರ, ಪಡಿತರ ಚೀಟಿ, ಭಾವಚಿತ್ರ ಹೊಂದಿರಬೇಕು. ದೃಷ್ಟಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್ ಕಿಟ್ ಯೋಜನೆ: ಯುಡಿಐಡಿ ಕಾರ್ಡ್, ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಶಾಲಾ/ಕಾಲೇಜು ದೃಢೀಕರಣ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ ಹೊಂದಿರಬೇಕು. ಮೇಲ್ಕಂಡ ಯೋಜನೆಗಳಿಗೆ ಸೇವಾಸಿಂಧು, ಗ್ರಾಮ ಒನ್, ಕರ್ನಾಟಕ ಒನ್ ಮತ್ತು ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ವೆಬ್‌ಸೈಟ್ https://sevasindhu.karnataka.gov.in/Sevasindhu/Kannada ಮೂಲಕ ಅರ್ಜಿ ಸಲ್ಲಿಸಿ, ಸ್ವೀಕೃತಿಯೊಂದಿಗೆ ಹಾರ್ಡ್ ಪ್ರತಿಯನ್ನು ಆಯಾ ತಾಲ್ಲೂಕಿನ ತಾಲ್ಲೂಕು ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿವಾಗಿ ಎಂಆರ್‌ಡಬ್ಲ್ಯೂ ಚಿತ್ರದುರ್ಗ–9880821934, ಚಳ್ಳಕೆರೆ–9611266930, ಹಿರಿಯೂರು–9902888901, ಹೊಳಲ್ಕೆರೆ–9740030227, ಹೊಸದುರ್ಗ–9741829990, ಮೊಳಕಾಲ್ಮುರು–9742725576 ಹಾಗೂ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಬಾಲಭವನ ಆವರಣ, ಸ್ಟೇಡಿಯಂ ಹತ್ತಿರ, ಚಿತ್ರದುರ್ಗ ದೂರವಾಣಿ ಸಂಖ್ಯೆ 08194–235284ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಎಂ.ವಿ.ವೀಣಾ ತಿಳಿಸಿದ್ದಾರೆ.

**ಜಿಲ್ಲಾಮಟ್ಟದ ಜನತಾದರ್ಶನದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿಕೆ**

# ಬರ ನಿರ್ವಹಣೆಗೆ ಸಮರೋಪಾದಿಯಲ್ಲಿ ಸಿದ್ಧತೆ

» **ಚಿತ್ರದುರ್ಗ**

ಜಿಲ್ಲೆಯಲ್ಲಿ ಉಂಟಾಗಿರುವ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಸಮರೋಪಾದಿಯಲ್ಲಿ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ರಾಜ್ಯ ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ ಸುಧಾಕರ್ ಹೇಳಿದರು.

ಚಳ್ಳಕೆರೆ ನಗರದ ಶ್ರೀ ಗುರು ರಾಘವೇಂದ್ರ ಕಲ್ಯಾಣ ಮಂಟಪದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ವತಿಯಿಂದ ಆಯೋಜಿಸಲಾಗಿದ್ದ ಜಿಲ್ಲಾಮಟ್ಟದ ಜನತಾದರ್ಶನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬರ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಜನರಿಗೆ ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವು ಸಮಸ್ಯೆ ಉದ್ಭವವಾಗದಂತೆ ನೋಡಿಕೊಳ್ಳಬೇಕು. ಎಲ್ಲಿಯಾದರೂ ಕುಡಿಯುವ ನೀರಿನ ಸಮಸ್ಯೆ ತಲೆ ತೋರಿದರೆ ತಕ್ಷಣವೇ ಬೋರ್‌ವೆಲ್ ಕೊರೆಸುವ ಕೆಲಸ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದ ಏಳು ತಿಂಗಳ ಒಳಗಾಗಿ ಚುನಾವಣಾ ಸಂದರ್ಭದಲ್ಲಿ ನೀಡಿದ ಭರವಸೆಯಂತೆ ಗ್ಯಾರಂಟಿಯೋಜನೆಗಳಾದಶಕ್ತಿಯೋಜನೆ, ಗೃಹಲಕ್ಷ್ಮೀ, ಗೃಹಜ್ಯೋತಿ, ಅನ್ನ ಭಾಗ್ಯ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಇದೇ ಜನವರಿ 12ರಂದು ಶಿವಮೊಗ್ಗದಲ್ಲಿ ಯುವನಿಧಿ ಯೋಜನೆಗೆ ಚಾಲನೆ ದೊರಕಲಿದೆ. ಈಗಾಗಲೇ ರಾಜ್ಯಾದ್ಯಂತ 43 ಸಾವಿರ ಅರ್ಜಿಗಳು ಯುವನಿಧಿ ಯೋಜನೆಗೆ ನೋಂದಣಿಯಾಗಿವೆ. ಒಟ್ಟು 4 ಲಕ್ಷ ಯುವಕ ಯುವತಿಯರು ಯೋಜನೆಗೆ ಅರ್ಜಿ ಸಲ್ಲಿಸಬಹುದು ಎಂಬ ಅಂದಾಜಿದೆ. ಜಿಲ್ಲೆಯ ಯುವಜನತೆ ಹೆಚ್ಚಿನ ಸಂಖ್ಯೆಯಲ್ಲಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ರಾಜ್ಯದ ಗ್ಯಾರಂಟಿ ಯೋಜನೆಗಳು ಯಶಸ್ವಿಯಾಗಿದ್ದು, ಶಕ್ತಿ ಯೋಜನೆ ಅಡಿ ಸುಮಾರು 100 ಕೋಟಿ ಅಧಿಕ ಮಹಿಳೆಯರು ಸರ್ಕಾರಿ ಬಸ್ಸುಗಳಲ್ಲಿ ಉಚಿತ ಪ್ರಯಾಣ ಮಾಡಿದ್ದಾರೆ. ಶೇಕಡ 97 ರಷ್ಟು ಮಹಿಳೆಯರಿಗೆ ಗೃಹಲಕ್ಷ್ಮೀ ಯೋಜನೆ ಜಾರಿ ಮಾಡಲಾಗಿದೆ ಎಂದರು.ಭದ್ರಾ ಮೇಲ್ದಂಡೆ ಯೋಜನೆ ಕುರಿತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಪರಿಶೀಲಿನಾ ಸಭೆ ಜರುಗಲಿದೆ. ಬಳಿಕ ಕಾಮಗಾರಿಯನ್ನು ಅದಷ್ಟು ಶೀಘ್ರವಾಗಿ ಪೂರ್ಣಗೊಳಿಸಿ ಈ ಭಾಗಕ್ಕೆ ಭದ್ರೆಯ ನೀರು ಹರಿಸಲಾಗುವುದು ಎಂದು ತಿಳಿಸಿದರು.

ಜನರ ಸಮಸ್ಯೆಗಳಿಗೆ ತಕ್ಷಣ ಪರಿಹಾರ ನೀಡುವ ಸಲುವಾಗಿ ಜನತಾ ದರ್ಶನ ಕಾರ್ಯಕ್ರಮ ಆಯೋಜಿಸಲಾಗಿದೆ. ಸ್ಥಳದಲ್ಲಿ ಪರಿಹಾರ ದೊರಕದ ಸಮಸ್ಯೆಗಳಿಗೆ ಕಾಲಮಿತಿಯಲ್ಲಿ ಪರಿಹಾರ ಒದಗಿಸುವಂತೆ ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ತಾಕೀತು ಮಾಡಿದರು.

ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಮಾತನಾಡಿ, ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ನಿರಂತರವಾಗಿ ಜನಸಂಪರ್ಕ ಸಭೆಗಳನ್ನು ನಡೆಸಲಾಗುತ್ತಿದ್ದು, ಈಗಾಗಲೇ 26 ಜನಸಂಪರ್ಕ ಸಭೆಗಳನ್ನು ಚಳ್ಳಕೆರೆ ಕ್ಷೇತ್ರದಾದ್ಯಂತ ಗ್ರಾಮ ಪಂಚಾಯಿತಿ ಕೇಂದ್ರದಲ್ಲಿ ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ಕರೆಸಿ, ಜನರ ಸಮಸ್ಯೆ ಬಗೆಹರಿಸಲಾಗಿದೆ ಎಂದು ತಿಳಿಸಿದ ಅವರು, ಜನತಾ ದರ್ಶನದಲ್ಲಿ ಸಲ್ಲಿಕೆಯಾದ ಪ್ರತಿಯೊಂದು ಅರ್ಜಿಗಳಿಗೆ ಉತ್ತರ ಕೊಡುವುದರ ಜೊತೆಗೆ ತಮ್ಮ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸ ಮಾಡಲಾಗುತ್ತಿದೆ ಎಂದರು.ಜಿಲ್ಲೆಯ ಚಳ್ಳಕೆರೆ ಹಾಗೂ ಮೊಳಕಾಲ್ಮುರು ತಾಲ್ಲೂಕುಗಳಲ್ಲಿ ವಿಶೇಷವಾಗಿ ಬರಗಾಲದ ಸಂದರ್ಭದಲ್ಲಿ ಈ ಮೊದಲು ಪಂಚಾಯಿತಿಗೊಂದರಂತೆ ಗೋಶಾಲೆ ತೆರೆಯಲಾಗಿತ್ತು. ಪ್ರಸಕ್ತ ಸಾಲಿನಲ್ಲಿ ಬರಗಾಲದ ಹಿನ್ನಲೆಯಲ್ಲಿ ಹೋಬಳಿಗೊಂದರಂತೆ ಗೋಶಾಲೆ ಸ್ಥಾಪನೆಗೆ ಈಗಾಗಲೇ ಪ್ರಸ್ತಾವ ಸಲ್ಲಿಸಲಾಗಿದ್ದು, ಸರ್ಕಾರ ಇದಕ್ಕೆ ಸಕರಾತ್ಮಕವಾಗಿ ಸ್ಪಂದಿಸಿದ್ದು, ಹೋಬಳಿಗೆ ಒಂದರಂತೆ ಗೋಶಾಲೆ ಪ್ರಾರಂಭ ಮಾಡಲು ಕ್ರಮವಹಿಸಲಾಗಿದೆ. ಜಿಲ್ಲೆಯ 1891 ದೇವರ ಎತ್ತುಗಳ ಮೇವಿಗೆ ಪ್ರತಿ ತಿಂಗಳೂ ರೂ.22 ಲಕ್ಷ ಬೇಕಾಗಿದ್ದು, ಅದಕ್ಕೆ ಸಂಬಂಧಪಟ್ಟಂತೆ ಈಗಾಗಲೆ ರೂ.10 ಲಕ್ಷ ಅನುದಾನವನ್ನು ಪಶುಸಂಗೋಪನೆ ಇಲಾಖೆ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮಂಜೂರಾತಿ ನೀಡಲಾಗಿದೆ ಎಂದು ತಿಳಿಸಿದರು.ಕುಡಿಯುವ ನೀರು ಸಮಸ್ಯೆ ತಲೆದೋರಿದ ಕಡೆಗಳಲ್ಲಿ ತಕ್ಷಣವೇ ಸಮರ್ಪಕವಾಗಿ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಕ್ರಮವಹಿಸಲಾಗುತ್ತಿದ್ದು, ಇದರ ಜೊತೆಗೆ ಜಾನುವಾರುಗಳಿಗೆ ಮೇವು, ಜನರಿಗೆ ಉದ್ಯೋಗ ನೀಡಲು ಅಧಿಕಾರಿಗಳು ಕ್ರಮವಹಿಸಬೇಕು ಎಂದು ಹೇಳಿದರು.ಜಿಲ್ಲಾಪೊಲೀಸ್‌ವರಿಷ್ಠಾಧಿಕಾರಿ ಧರ್ಮೇಂಧರ್ ಕುಮಾರ್ ಮೀನಾ, ಆಹಾರ ಇಲಾಖೆ ಜಂಟಿ ನಿರ್ದೇಶಕ ಮಧುಸೂದನ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ಡಿವೈಎಸ್‌ಪಿ ರಾಜಣ್ಣ, ತಹಶೀಲ್ದಾರ್ ರೆಹಾನ್ ಪಾಷಾ, ತಾಲ್ಲೂಕು ಪಂಚಾಯಿತಿ ಇಒ ಶಶಿಧರ್ ಸೇರಿದಂತೆ ಚಳ್ಳಕೆರೆ ನಗರಸಭೆ ಸದಸ್ಯರು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.




### 29000 ರೈತರಗೆ ಶೀಘ್ರ ಬರ ಪರಿಹಾರ

ಫ್ರೂಟ್ಸ್ ತಂತ್ರಾಂಶ ಆಧರಿಸಿ ನೇರವಾಗಿ ರೈತರ ಖಾತೆ ಬರ ಪರಿಹಾರದ ಧನ ವರ್ಗಾಯಿಸುವ ಯೋಜನೆಯನ್ನು ರಾಜ್ಯ ಸರ್ಕಾರ ಪ್ರಾಯೋಗಿಕವಾಗಿ ಚಳ್ಳಕೆರೆ ತಾಲ್ಲೂಕಿನಲ್ಲಿ ಜಾರಿಮಾಡಲಿದೆ. ಈಗಾಗಲೇ ತಾಲ್ಲೂಕಿನ 29 ಸಾವಿರ ರೈತರ ವಿವರಗಳನ್ನು ಫ್ರೂಟ್ಸ್ ತಂತ್ರಾಂಶಕ್ಕೆ ಜೋಡಣೆ ಮಾಡಲಾಗಿದೆ. ಶೀಘ್ರವಾಗಿ ಪರಿಹಾರ ಧನ ನೇರವಾಗಿ ರೈತರ ಖಾತೆ ಜಮೆಯಾಗಲಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಜನರ ಮನೆ ಬಾಗಿಲಿಗೆ ತೆರಳಿ, ಸಮಸ್ಯೆಗಳನ್ನು ಆಲಿಸಿ ಪರಿಹರಿಸುವ ಉದ್ದೇಶವನ್ನು ಜನತಾ ದರ್ಶನ ಕಾರ್ಯಕ್ರಮ ಹೊಂದಿದೆ. ಜನರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ಜಿಲ್ಲಾ ಕೇಂದ್ರಗಳಿಗೆ ಅಲೆದಾಟ ಮಾಡುವುದನ್ನು ತಪ್ಪಿಸಿ, ಸ್ಥಳದಲ್ಲಿಯೇ ಪರಿಹಾರ ನೀಡಲಾಗುವುದು. ಜನತಾ ದರ್ಶನದಲ್ಲಿ ಸಲ್ಲಿಸಿದ ಅರ್ಜಿಗಳನ್ನು ಐ.ಪಿ.ಆರ್.ಜಿ.ಎಸ್ ಪೋರ್ಟಲ್ ಮೂಲಕ ಗಣಕೀಕೃತಗೊಳಿಸಲಾಗುವುದು. ಹೀಗೆ ಗಣೀಕೃತಗೊಂಡ ಅರ್ಜಿಗಳಿಗೆ ಜಿಲ್ಲಾ ಹಂತದಲ್ಲಿ ಪರಿಹಾರ ದೊರಕದಿದ್ದರೆ. ಸರ್ಕಾರದ ಉನ್ನತ ಅಧಿಕಾರಿಗಳು ಸಹ ಈ ಅರ್ಜಿಗಳನ್ನು ಪರಿಶೀಲಿಸಿ ಪರಿಹಾರ ಒದಗಿಸಲು ಐ.ಪಿ.ಆರ್.ಜಿ.ಎಸ್ ಪೋರ್ಟಲ್‌ನಲ್ಲಿ ಅವಕಾಶವಿದೆ. ಆಡಳಿತದಲ್ಲಿ ಪಾರರ್ಶಕತೆ ತರುವ ಸಲುವಾಗಿ ಸಕಾಲ ಹಾಗೂ ಇ–ಆಫೀಸ್‌ಗಳನ್ನು ಎಲ್ಲಾ ತಾಲ್ಲೂಕು ಕಚೇರಿ ಹಾಗೂ ಜಿಲ್ಲಾ ಮಟ್ಟದ ಕಚೇರಿಗಳಲ್ಲಿ ಅನುಷ್ಠಾನಗೊಳಿಸಲಾಗಿದೆ ಎಂದರು. ಜಿಲ್ಲೆಯಲ್ಲಿ ಇದುವರೆಗೂ ಜರುಗಿದ 8 ಜನತಾ ದರ್ಶನದಲ್ಲಿ 2229 ಅರ್ಜಿಗಳು ಸ್ವೀಕರಿಸಲಾಗಿದೆ. ಇದರಲ್ಲಿ 1304 ಅರ್ಜಿಗಳನ್ನು ವಿಲೇವಾರಿ ಮಾಡಿ ಜನರ ಸಮಸ್ಯೆಗಳಿಗೆ ಪರಿಹಾರ ನೀಡಲಾಗಿದೆ. 925 ಅರ್ಜಿಗಳ ವಿಲೇವಾರಿಗೆ ಬಾಕಿಯಿದೆ. ಇದರಲ್ಲಿ 392 ಕಂದಾಯ ಹಾಗೂ 503 ಇತರೆ ಇಲಾಖೆ ಸಂಬಂಧಪಟ್ಟ ಅರ್ಜಿಗಳಿವೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ನೇತೃತ್ವದಲ್ಲಿ ನಗರಸಭೆಯ ಸರ್ವ ಸದಸ್ಯರು ನಗರಸಭೆ ಆಡಳಿತಾಧಿಕಾರಿಯಾಗಿರುವ ಜಿಲ್ಲಾಧಿಕಾರಿ ದಿವ್ಯಪ್ರಭು ಅವರಿಗೆ ನಗರಸಭೆ ಸಭೆಯನ್ನು ನಡೆಸುವಂತೆ ಮನವಿ ಮಾಡಿದರು.

### ಜನರ ಗಮನ ಸೆಳೆದ ವಸ್ತು ಪ್ರದರ್ಶನ

ಜನತಾ ದರ್ಶನದ ಅಂಗವಾಗಿ ಶ್ರೀ ಗುರು ರಾಘವೇಂದ್ರ ಕಲ್ಯಾಣ ಮಂಟಪದ ಎದುರು ಹಾಕಲಾಗಿದ್ದ ವಿವಿಧ ಇಲಾಖೆಗಳ ವಸ್ತು ಪ್ರದರ್ಶನ ಮಳಿಗೆಗಳು ಜನರ ಗಮನ ಸೆಳೆದವು. ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯದ ಗೃಹಲಕ್ಷ್ಮಿ ಯೋಜನೆಯ ಪೋಟೋ ಸ್ಟ್ಯಾಂಡ್ ಬಳಿ ಮಹಿಳೆಯರು ಪೋಟೋ ತೆಗೆದುಕೊಳ್ಳುವ ದೃಶ್ಯ ಕಂಡುಬಂದಿತು. ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಚಳ್ಳಕೆರೆ ಶಾಸಕ ರಘುಮೂರ್ತಿ, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಗೃಹಲಕ್ಷ್ಮೀ ಪೋಟೋ ಸ್ಟ್ಯಾಂಡ್ ಬಳಿ ಪೋಟೋ ಪೋಸ್ ನೀಡಿ ಸಂಭ್ರಮಿಸಿದರು. ರೈತರಿಗೆ ಅನುಕೂಲವಾಗುವಂತೆ ಕೃಷಿ ವಸ್ತು ಪ್ರದರ್ಶನದಲ್ಲಿ ಕೃಷಿಗೆ ಅಗತ್ಯವಾದ ಯಂತ್ರಗಳು, ಸಾವಯವ ಗೊಬ್ಬರಗಳ ಬಳಕೆ, ರೇಷ್ಮೆ ಕೃಷಿ ಸಾಗಾಣಿಕೆ ಮಳಿಗೆಗಳನ್ನು ತೆರೆಯಲಾಗಿತ್ತು. ಚಳ್ಳಕೆರೆ ನಗರಸಭೆಯಿಂದ ಕಸ ವಿಂಗಡಣೆ ಹಾಗೂ ನೈರ್ಮಲ್ಯ ಹಾಗೂ ಪರಿಸರ ರಕ್ಷಣೆ ಕುರಿತಾದ ವಿಡಿಯೋ ತುಣುಕನ್ನು ಎಲ್.ಇ.ಡಿ ಪರದೆ ಮೂಲಕ ಸಾರ್ವಜನಿಕರಿಗೆ ಪ್ರದರ್ಶಿಸಲಾಯಿತು. ಸ್ತ್ರೀ ಸ್ವ–ಸಹಾಯ ಸಂಘಗಳು ಮಹಿಳೆಯರು ತಯಾರಿಸಿದ ರೊಟ್ಟಿ, ಸಿಹಿ ತಿನಿಸು, ಉಪ್ಪಿನಕಾಯಿ ಸೇರಿದಂತೆ ಇತರೆ ಉತ್ಪನ್ನಗಳನ್ನು ಜನರು ಆಸಕ್ತಿಯಿಂದ ಖರೀದಿಸಿದರು. ನಂದಿನಿ ಸಹಿ ಉತ್ಪನ್ನಗಳು, ಜಲಜೀವನ್ ಮಿಷನ್, ಶಿಕ್ಷಣ ಇಲಾಖೆ ಆರೋಗ್ಯ, ಅಲ್ಪಸಂಖ್ಯಾತರ ಅಭಿವೃದ್ಧಿ ಸೇರಿದಂತೆ ಇತರೆ ಇಲಾಖೆಗಳ ವಸ್ತು ಪ್ರದರ್ಶನ ಮಳಿಗೆಗಳು ಇದ್ದವು.







## ಪ್ರಮುಖ ಸುದ್ದಿ

# ನಾವು ನಡೆಸುವ ಧಾರ್ಮಿಕ ಪೂಜಾ ಕಾರ್ಯಕ್ರಮಗಳು ನಿರಂತರ ಶ್ರೇಯಸ್ಸನ್ನು ಉಂಟು ಮಾಡುತ್ತವೆ: ಶಾಸಕ ಟಿ.ರಘುಮೂರ್ತಿ

» **ಚಳ್ಳಕೆರೆ**

ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಜನಸಾಮಾನ್ಯರಸಂಕಷ್ಟಗಳಿಗೆನೆರವಾಗುವುದಲ್ಲದೆ, ಈ ಭಾಗದ ಕುಡಿಯುವ ನೀರಿನ ಸಮಸ್ಯೆಯನ್ನು ನಿವಾರಿಸಲು ಆಂಜನೇಯ ಸ್ವಾಮಿಯ ಕೃಪಾಕಟಾಕ್ಷ ಕಾರಣ. ಯಾರು ದೇವರನ್ನು ನಂಬುತ್ತಾರೋ ಅವರು ಬದುಕಿನಲ್ಲಿನೆಮ್ಮದಿ ಕಾಣುತ್ತಾರೆಂದು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ತಿಳಿಸಿದರು. ಅವರು, ಭಾನುವಾರ ಜುಂಜರಗುಂಟೆ ಗ್ರಾಮದ ಶ್ರೀಆಂಜನೇಯಸ್ವಾಮಿ ದೇವಸ್ಥಾನದ ಮಹಾದ್ವಾರ ಉದ್ಘಾಟನೆ ಹಾಗೂ ರಥೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಪ್ರಸ್ತುತ ವರ್ಷ ಈ ಭಾಗದಲ್ಲಿ ನಿರೀಕ್ಷೆಗೂ ಮೀರಿದ ಹೆಚ್ಚಿನ ಧಾರ್ಮಿಕ ಕಾರ್ಯಕ್ರಮಗಳು ನಿರಂತರವಾಗಿ ನಡೆಯುತ್ತಾ ಬಂದಿವೆ. ಪ್ರತಿನಿತ್ಯ ಕ್ಷೇತ್ರದ ಯಾವುದಾದರೂ ಹಳ್ಳಿಯಲ್ಲಿ ದೇವರ ಪೂಜಾ ಕಾರ್ಯಗಳು ಇರುತ್ತವೆ. ಯಾವು ದೇ ಕಾರ್ಯಕ್ರಮಕ್ಕೂ ಮೊದಲು ದೇವರ ಸೇವೆಗೆ ಆದ್ಯತೆ ನೀಡುತ್ತಾನೆ. ಇಂದು ಗ್ರಾಮಕ್ಕೆ ಆಗಮಿಸಿ ಶ್ರೀಸ್ವಾಮಿಯ ದರ್ಶನ ಪಡೆದು ಪೂಜೆ ಸಲ್ಲಿಸಿದ್ದು, ನನಗೆ ನೆಮ್ಮದಿ ಉಂಟು ಮಾಡಿದೆ ಎಂದರು. ಇದೇ ಸಂದರ್ಭದಲ್ಲಿ ದೇವಸ್ಥಾನದ ಧರ್ಮದರ್ಶಿಗಳು, ಗ್ರಾಮಸ್ಥರು ಹಾಗೂ ಗ್ರಾಪಂ ಅಧ್ಯಕ್ಷರು ಶಾಸಕರನ್ನು ಸನ್ಮಾನಿಸಿ, ಅಭಿನಂದಿಸಿದರು. ಧರ್ಮದರ್ಶಿ ಜಿ.ಟಿ.ಗೌಡ್ರು, ಗೊಂಚಿಗಾರ್ ಗಿರೀಶ್, ಗ್ರಾಪಂ ಅಧ್ಯಕ್ಷ ಕಲ್ಲೇಶಪ್ಪ, ಮುಖಂಡರಾದ ನಿಂಗಪ್ಪ, ಚನ್ನಕೇಶವ, ಪ್ರದೀಪ್, ನಾಗರಾಜ ಉಪಸ್ಥಿತರಿದ್ದರು.






ಚಳ್ಳಕೆರೆ ತಾಲ್ಲೂಕಿನ ಜುಂಜರಗುಂಟೆ ಗ್ರಾಮದ ಶ್ರೀಆಂಜನೇಯಸ್ವಾಮಿ ದೇವಸ್ಥಾನದ ಮಹಾದ್ವಾರ ಉದ್ಘಾಟನೆ ಹಾಗೂ ರಥೋತ್ಸವ ಕಾರ್ಯಕ್ರಮದಲ್ಲಿ ಶಾಸಕ ಟಿ. ರಘುಮೂರ್ತಿರವರನ್ನು ಸನ್ಮಾನಿಸಿದರು.

## ಫಾಸ್ಟ್ ನ್ಯೂಸ್

### ಲಕ್ಕಿಹಳ್ಳಿ ಮುದ್ದುಲಿಂಗೇಶ್ವರ ಸ್ವಾಮಿ ಸಂಭ್ರಮದ ಕಾರ್ತಿಕ ಮಹೋತ್ಸವ



» **ಹೊಸದುರ್ಗ**

ತಾಲೂಕಿನ ಮಾಡದಕೆರೆ ಹೋಬಳಿಯ ಲಕ್ಕಿಹಳ್ಳಿ ಗ್ರಾಮದಲ್ಲಿ ನೆಲೆಗೊಂಡಿರುವ ಶ್ರೀ ಮುದ್ದುಲಿಂಗೇಶ್ವರ ಸ್ವಾಮಿಯ ಕಡೆ ಕಾರ್ತಿಕ ಮಹೋತ್ಸವ ಭಾನುವಾರ ಸಂಜೆ ಅತ್ಯಂತ ಸಂಭ್ರಮ ಸಡಗರದಿಂದ ವಿಜೃಂಭಣೆಯಿಂದ ನಡೆಯಿತು. ಕಾರ್ತಿಕ ಮಹೋತ್ಸವದ ನಿಮಿತ್ತವಾಗಿ ಸ್ವಾಮಿಯ ಮೂಲಸ್ಥಾನ ಹೊರಮಠ ದೇವಾಲಯವನ್ನು ಹಸಿರು ತಳಿರು ತೋರಣ, ಚೆಂಡು ಹೂ, ಕನಕಾಂಬರ, ಕಾಕಟ, ಮಲ್ಲಿಗೆ, ಸುಗಂಧರಾಜ, ಸೇವಂತಿಗೆ ಮತ್ತು ಇತರ ಬಣ್ಣದ ಹೂಗಳಿಂದ ಅಲಂಕಾರ ಮಾಡಲಾಗಿತ್ತು. ದೇವಾಲಯದ ಹೊರಾಂಗಣ ಮತ್ತು ಒಳಾಂಗಣದಲ್ಲಿ ನೂರಕ್ಕೂ ಹೆಚ್ಚು ದೀಪಗಳನ್ನು ಹಚ್ಚಲಾಗಿತ್ತು. ಧಾರ್ಮಿಕ ಸಾಂಪ್ರದಾಯದಂತೆ ವಿಶೇಷ ಪೂಜಾ ಕಾರ್ಯಗಳು ನಡೆದವು. ಇನ್ನೂ ದೇವರ ಉದ್ಭವಮೂರ್ತಿಯನ್ನು ವಿಶೇಷವಾಗಿ ಸಿಂಗಾರ ಮಾಡಲಾಗಿತ್ತು. ಬಂದಂತಹ ನೂರಾರು ಭಕ್ತರು ದೇವರಿಗೆ ಪೂಜೆಸಲ್ಲಿಸಿ ಭಕ್ತಿ ಸಮರ್ಪಿಸಿದರು. ದೇವಾಲಯಕ್ಕೆ ಬಂದ ಭಕ್ತರಿಗೆ ಪ್ರಸಾದ ವಿನಿಯೋಗ ನಡೆಯಿತು.

### ಕೋಳಿ ಸಾಕಾಣಿಕೆ ಹಾಗೂ ತೋಟಗಾರಿಕೆ ಬೆಳೆ ನಿರ್ವಹಣೆ ಕುರಿತು ತರಬೇತಿ ಕಾರ್ಯಗಾರ

▪ **ಚಿತ್ರದುರ್ಗ**

ಹಿರಿಯೂರು ತಾಲ್ಲೂಕಿನ ಬಬ್ಬೂರು ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಜನವರಿ 9 ರಂದು ಬೆಳಿಗ್ಗೆ 10ಕ್ಕೆ ವೈಜ್ಞಾನಿಕ ಕೋಳಿ ಸಾಕಾಣಿಕೆ ಹಾಗೂ ಜ.10 ರಂದು ಬೆಳಿಗ್ಗೆ 10ಕ್ಕೆ ಸಾವಯವ ಮತ್ತು ನೈಸರ್ಗಿಕ ಪದ್ಧತಿಯಲ್ಲಿ ತೋಟಗಾರಿಕೆ ಬೆಳೆಗಳ ನಿರ್ವಹಣೆ ಕುರಿತು ಒಂದು ದಿನ ತರಬೇತಿ ಕಾರ್ಯಗಾರ ಹಮ್ಮಿಕೊಳ್ಳಲಾಗಿದೆ. ಜ.9 ರಂದು ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಸಹಾಯಕ ನಿರ್ದೇಶಕ ಡಾ. ತಿಪ್ಪೇಸ್ವಾಮಿ ಪಶುಸಂಗೋಪನಾ ಇಲಾಖೆ ನಿವೃತ್ತ ಸಹಾಯಕ ನಿರ್ದೇಶಕ ಡಾ. ದೊಡ್ಡಮಲ್ಲಯ್ಯ, ಹಿರಿಯೂರು ಪಶು ವೈದ್ಯಾಧಿಕಾರಿ ಹಾಗೂ ಕುಕ್ಕುಟ ತಜ್ಞ ಡಾ.ಸಂಪತ್ ಕುಮಾರ್ ಜೆ ಕೋಳಿಯಲ್ಲಿ ಉತ್ತಮ ತಳಿಗಳ ಆಯ್ಕೆ, ಕೋಳಿ ಫಾರಂ ನಿರ್ವಹಣೆ, ಆಹಾರ ನಿರ್ವಹಣೆ ಮತ್ತು ಅವುಗಳ ಆರೋಗ್ಯ ನಿರ್ವಹಣೆ ಬಗ್ಗೆ ವಿಷಯ ಮಂಡನೆ ಮಾಡಲಿದ್ದಾರೆ. ಜ.10 ರಂದು ಪ್ರಗತಿಪರ ಸಾವಯವ ಮತ್ತು ನೈಸರ್ಗಿಕ ಕೃಷಿಕರಾದ ಪ್ರೊ. ಮಹಾಲಿಂಗಯ್ಯ, ಹಫೀಝ್ ಉಲ್ಲಾಖಾನ್, ಮೃತ್ಯುಂಜಯಪ್ಪ ಹಾಗೂ ಚನ್ನಕೇಶವ ಸ್ವಾಮಿ, ಸಾವಯವ ಮತ್ತು ನೈಸರ್ಗಿಕ ಪದ್ಧತಿಯಲ್ಲಿ ಅಡಿಕೆ, ತೆಂಗು ಮತ್ತು ಹಣ್ಣಿನ ಬೆಳೆಗಳ ನಿರ್ವಹಣೆ, ಅಂತರ ಬೆಳೆ ಮತ್ತು ಬಹುಬೆಳೆ ಪದ್ಧತಿಗಳ ಬಗ್ಗೆ ವಿಷಯ ಮಂಡನೆ ಮಾಡಲಿದ್ದಾರೆ. ಪ್ರತಿ ತರಬೇತಿಗೆ 50 ಜನರು ಮಾತ್ರ ಪಾಲ್ಗೊಳ್ಳಲು ಮಾತ್ರ ಅವಕಾಶವಿದೆ. ತರಬೇತಿ ಬೆಳಿಗ್ಗೆ 10 ಗಂಟೆಗೆ ಆರಂಭವಾಗುವುದು. ತರಬೇತಿಯಲ್ಲಿ ಭಾಗವಹಿಸಲು ಕೃಷಿ ಕೇಂದ್ರ ಸಹಾಯಕ ನಿರ್ದೇಶಕ ರಜನೀಕಾಂತ ಆರ್ (8277931058), ಕೃಷಿ ಅಧಿಕಾರಿಗಳಾದ ಟಿ.ಪಿ.ರಂಜಿತಾ (8277930959) ಮತ್ತು ಪವಿತ್ರಾ ಎಂ. ಜೆ. (9535412286) ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿಕೊಳ್ಳಬಹುದು ಎಂದು ಪ್ರಕಟಣೆ ತಿಳಿಸಿದೆ.

### ಇಂದು ಕಾಲುವೇಹಳ್ಳಿ ಬಂಡೆ ಬಸವೇಶ್ವರಸ್ವಾಮಿ ರಥೋತ್ಸವ

» **ಚಳ್ಳಕೆರೆ**

ತಾಲ್ಲೂಕಿನ ಕಾಲುವೇಹಳ್ಳಿ ಗ್ರಾಮದ ಬಂಡೆ ಬಸವೇಶ್ವರಸ್ವಾಮಿ ದೇವರ ಕಾರ್ತಿಕೋತ್ಸವ ಕಾರ್ಯಕ್ರಮ ಜ.8 ಮತ್ತು 9 ಎರಡು ದಿನಗಳ ಕಾಲ ನಡೆಯಲಿದೆ ಎಂದು ದೇವಸ್ಥಾನದ ಆಡಳಿತ ಮಂಡಳಿ ತಿಳಿಸಿದೆ. ಜ.8ರ ಸೋಮವಾರ ಬೆಳಗ್ಗೆ ಗಂಗಾಪೂಜೆಯೊಂದಿಗೆ ಕಾರ್ಯಕ್ರಮ ಆರಂಭವಾಗಲಿದ್ದು, ನಂತರ ಶ್ರೀಸ್ವಾಮಿಗೆ ರುದ್ರಾಭಿಷೇಕ ಮತ್ತು ಅಖಂಡ ಭಜನೆ ಕಾರ್ಯಕ್ರಮದ ನಂತರ ಭವ್ಯ ರಥೋತ್ಸವ ಇರುತ್ತದೆ. ದಿ.9ರ ಮಂಗಳವಾರ ಪಲ್ಲಕ್ಕಿ ಉತ್ಸವ ಹಾಗೂ ತೀರ್ಥಪ್ರಸಾದ ವಿನಿಯೋಗ ಕಾರ್ಯಕ್ರಮ ನಡೆಸಲಾಗುವುದು. ಭಕ್ತರು ಸಕಾಲದಲ್ಲಿ ಆಗಮಿಸಿ ಪೂಜಾ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಮನವಿ ಮಾಡಿದೆ.

# ವರ್ತಮಾನದ ಹೊಸ ಕಾನೂನುಗಳನ್ನು ಸವಾಲಾಗಿ ಸ್ವೀಕರಿಸಿ: ಎಎಸ್‌ಜಿ ಅರವಿಂದ್ ಕಾಮತ್

» **ದಾವಣಗೆರೆ**

ವರ್ತಮಾನದ ಹೊಸ ಕಾನೂನುಗಳನ್ನು ಸವಾಲಾಗಿ ಸ್ವೀಕರಿಸಿ ನ್ಯಾಯದಾನ ಪ್ರಕ್ರಿಯೆಯಲ್ಲಿ ಯುವ ವಕೀಲರು ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಕಕ್ಷಿದಾರನಿಂದ ಪ್ರಕರಣದ ಪೂರ್ಣ ವಿವರಗಳನ್ನು ಪಡೆದುಕೊಂಡು, ಅವನ ಸೂಚನೆಗಳನ್ನು ಗುರುತಿಸಿಕೊಂಡು ಅಗತ್ಯವಿರುವ ಎಲ್ಲಾ ದಾಖಲೆಗಳನ್ನು ಆರಂಭದಿಂದಲೇ ಸಂಗ್ರಹಿಸಿಕೊಂಡು ಪ್ರಕರಣವನ್ನು 360 ಕೋನದಲ್ಲಿ ವೀಕ್ಷಿಸಿ ಪಡೆದುಕೊಳ್ಳ ಬಹುದಾದ ಪರಿಹಾರಗಳ ಬಗ್ಗೆ ಅಧ್ಯಯನ ಮಾಡಿ, ಸೂಕ್ತ ನ್ಯಾಯಾಲಯ ಅಥವಾ ವೇದಿಕೆಯತ್ತ ಸಾಗಬೇಕೆಂದು ಅಡಿಷನಲ್ ಸಾಲಿಸಿಟರ್ ಜನರಲ್ ಕೆ.ಅರವಿಂದ್ ಕಾಮತ್ ಸಲಹೆ ನೀಡಿದರು.



ನಗರದ ವಕೀಲರ ಸಾಂಸ್ಕೃತಿಕ ಭವನದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ ಜಿಲ್ಲಾ ವಕೀಲರ ಸಂಘ, ದಾವಣಗೆರೆ ವತಿಯಿಂದ ನ್ಯಾಯದಾನದ ಪ್ರಕ್ರಿಯೆಯಲ್ಲಿ ವಕೀಲರ ವೃತ್ತಿ ಕೌಶಲ್ಯಗಳ ಕುರಿತ ಉಪನ್ಯಾಸ ಮಾಲಿಕೆ–5ನ್ನು ಉದ್ಘಾಟಿಸಿ ಉಪನ್ಯಾಸ ನೀಡಿದರು.

ಉದಾತ್ತ ವಕೀಲ ವೃತ್ತಿಗೆ ಸರಿಸಟಿಯಾದ ಇನ್ನೊಂದು ವೃತ್ತಿಯಿಲ್ಲ. ನೊಂದ ಕಕ್ಷಿದಾರರಿಗೆ ನ್ಯಾಯಾಲಯದಲ್ಲಿ ಪರಿಹಾರಗಳನ್ನು ದೊರಕಿಸಿದ ಸಂದರ್ಭಗಳಲ್ಲಿ ವಕೀಲರಿಗೆ ಸಿಗುವ ಆನಂದ ಅವರ್ಣನೀಯ. ಪ್ರಕರಣದ ಸಂಗತಿಗಳ ಬಗ್ಗೆ ಪೂರ್ಣ ಅರಿವಿದ್ದಾಗ ಮಾತ್ರವೇ ಅವುಗಳನ್ನು ಸೂಕ್ತ ರೀತಿಯಲ್ಲಿ ನ್ಯಾಯಾಲಯಕ್ಕೆ ಮನಗಾಣುವಂತೆ ನಿವೇದಿಸಲು ಸಾಧ್ಯ ಆಗುತ್ತದೆ ಎಂದು ಪ್ರತಿಪಾದಿಸಿದರು.

ಶಾಸಕಾಂಗ ರೂಪಿಸಿದ ಕಾನೂನುಗಳು ನ್ಯಾಯಾಲಯದ ತೀರ್ಪುಗಳು ಹಾಗೂ ಕಾನೂನಿನ ಇತ್ತೀಚೀನ ಅರ್ಥ ವಿವರಣೆಗಳೊಂದಿಗೆ ಸಿದ್ಧರಾಗಿ ಆತ್ಮವಿಶ್ವಾಸದಿಂದ ನ್ಯಾಯಾಲಯಕ್ಕೆ ಹೋಗಬೇಕು. ಜ್ಞಾನ ಸುಲಭವಾಗಿ ಲಭಿಸದು. ಕಾನೂನು ಪುಸ್ತಕಗಳ ಜೊತೆಜೊತೆಗೆ ಕಾನೂನೇತರ ಗ್ರಂಥಗಳನ್ನು ಸಹ ಅಧ್ಯಯನ ಮಾಡಬೇಕು. ವೃತ್ತಿಯಲ್ಲಿ ಯಶಸ್ಸು ಸಾಧಿಸಿದ ನ್ಯಾಯವಾದಿಗಳ, ನ್ಯಾಯಾಧೀಶರ ಗ್ರಂಥಗಳನ್ನು ಓದಿ ಸ್ಫೂರ್ತಿ ಪಡೆಯಬೇಕೆಂದರು.

ವಕೀಲರು ಯಾವುದೇ ಸಂದರ್ಭದಲ್ಲೂ ವೃತ್ತಿ ಸಂಹಿತೆಯಿಂದ ದೂರ ಸರಿಯದೇ ಕ್ಷಣಿಕ ಲಾಭಕ್ಕಾಗಿ ಸಂಗತಿಗಳನ್ನು ನ್ಯಾಯಾಲಯದಿಂದ ಮುಚ್ಚಿಡಲು ಪ್ರಯತ್ನಿಸದೇ ಇದ್ದಾಗ ಮಾತ್ರ ವಕೀಲರು ನ್ಯಾಯಾಲಯದ ಗೌರವಕ್ಕೆ ಪಾತ್ರರಾಗಲು ಸಾಧ್ಯ ಎಂದರು.

ಮುಖ್ಯಅತಿಥಿಗಳಾಗಿಆಗಮಿಸಿದ್ದಪ್ರಧಾನ ಜಿಲ್ಲಾ ಮತ್ತು ಸತ್ರಯ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ಮಾತನಾಡಿ, ಕೇಸಿನ ಸಂಗತಿಗಳನ್ನು ಸರಿಯಾಗಿ ನಿರೂಪಿಸಿ, ಕೋರ್ಟಿನ ಅಮೂಲ್ಯ ಸಮಯವನ್ನು ವ್ಯರ್ಥ ಮಾಡದೇ ಯುಕ್ತ ಪರಿಹಾರವನ್ನು ನ್ಯಾಯಾಲಯದಿಂದ ಪಡೆಯಲು ವಕೀಲರು ಪ್ರಯತ್ನಿಸಬೇಕೆಂದು ತಿಳಿಸಿದರು.

ಅಧ್ಯಕ್ಷತೆವಹಿಸಿದ್ದಜಿಲ್ಲಾವಕೀಲರಸಂಘದ ಅಧ್ಯಕ್ಷ ಎಲ್.ಎಚ್.ಅರುಣ್‌ಕುಮಾರ್ ಮಾತನಾಡಿ, ಉಪನ್ಯಾಸ ಮಾಲಿಕೆಯು ಮುಂದುವರೆಯಲಿದ್ದು, ಮತ್ತಷ್ಟು ಉತ್ತಮ ಕಾರ್ಯಗಳನ್ನು ಮುಂದಿನ ದಿನಗಳಲ್ಲಿ ರೂಪಿಸುವ ಮೂಲಕ ಯುವ ವಕೀಲರ ವೃತ್ತಿ ಸಾಮರ್ಥ್ಯವನ್ನು ಹೆಚ್ಚಿಸಲಾಗುವುದು ಎಂದು ಹೇಳಿದರು.

1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಜೆ.ವಿ.ವಿಜಯಾನಂದ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ್ ಮಾತನಾಡಿದರು.

ಈ ವೇಳೆ ಸಂಘದ ಉಪಾಧ್ಯಕ್ಷ ಜಿ.ಕೆ.ಬಸವರಾಜ್ ಗೋಪನಾಳು, ಕಾರ್ಯದರ್ಶಿ ಎಸ್.ಬಸವರಾಜು, ಸಹ ಕಾರ್ಯದರ್ಶಿ ಎ.ಎಸ್.ಮಂಜುನಾಥ್, ಜಿಲ್ಲಾ ವಕೀಲರ ಸಂಘದ ಕಾರ್ಯಕಾರಿ ಸಮಿತಿ ಸದಸ್ಯರಾದ ವಾಗೀಶ್ ಕಟ್ಟಿಗೆಹಳ್ಳಿಮಠ,ಎಲ್.ನಾಗರಾಜ್,ಚೌಡಪ್ಪ, ಭಾಗ್ಯಲಕ್ಷ್ಮೀ, ಸಂತೋಷ್‌ಕುಮಾರ್, ಮಧುಸೂಧನ್,ರಾಘವೇಂದ್ರ,ಬಿ.ಅಜ್ಜಯ್ಯ ಇತರರು ಇದ್ದರು.

## ಎಲ್ಲ ವರ್ಗಕ್ಕೂ ಆರೋಗ್ಯ ದಾಸೋಹ ನಮ್ಮ ಧ್ಯೇಯ

» **ತ್ಯಾವಣಿಗೆ**

ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಶಾಲೆಗಳೇ ಅನುಭವ ಮಂಟಪಗಳಾಗಿದ್ದು, ಕಿರಿಯರು ಮತ್ತು ಹಿರಿಯರನ್ನು ಒಂದೆಡೆ ಒಗ್ಗೂಡಿಸಿ ಪ್ರೀತಿ ಆರೈಕೆ ಟ್ರಸ್ಟ್ ಆರೋಗ್ಯ ದಾಸೋಹ ನೀಡುತ್ತಿರುವುದು ಧನ್ಯತೆ ನೀಡಿದೆ ಎಂದು ದಾವಣಗೆರೆಯ ಆರೈಕೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಮುಖ್ಯಸ್ಥ ಡಾ.ರವಿಕುಮಾರ್‌ಟಿ.ಜಿ. ಹೇಳಿದರು.



ಚನ್ನಗಿರಿ ತಾಲೂಕಿನ ತ್ಯಾವಣಗಿಯ ಪ್ರಕೃತಿ ವಿದ್ಯಾಲಯದಲ್ಲಿ ಆರೈಕೆ ಆಸ್ಪತ್ರೆ ವತಿಯಿಂದ ಆಯೋಜಿಸಿದ್ದ ಆರೋಗ್ಯ ಉಚಿತ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಇಂದಿನ ಆಧುನಿಕ ಯುಗದಲ್ಲಿ ಆರೋಗ್ಯವೇ ಭಾಗ್ಯವೆಂಬುದು ಎಲ್ಲ ವಯೋಮಾನದವರಿಗೂ ಅನ್ವಯ ಆಗುತ್ತಿದೆ.ಅಬಾಲ ವೃದ್ಧರ ಆದಿಯಾಗಿ ಎಲ್ಲರೂ ಕೂಡ ಆರೋಗ್ಯದಿಂದ ಇದ್ದಾಗ ಪ್ರತಿ ಮನೆಯ ವಾತಾವರಣವೂ ಕೂಡ ಸಂತೋಷದಿಂದ ಇರುತ್ತದೆ.

ಇದರಿಂದಾಗಿ, ಎಲ್ಲರೂ ತಮ್ಮ ಕೆಲಸಗಳಲ್ಲಿ ತೊಡಗಿಸಿಕೊಂಡು, ಪ್ರಗತಿ ಹೊಂದಲು ಸಾಧ್ಯವಿದೆ. ಪ್ರತಿಯೊಬ್ಬ ಪ್ರಜೆಯ ಪ್ರಗತಿಯೇ ಭಾರತದ ಪ್ರಗತಿ ಎಂಭ ಧ್ಯೇಯದ ಸಾಕಾರಕ್ಕಾಗಿ ಆರೋಗ್ಯ ಉಚಿತ ತಪಾಸಣೆ ಶಿಬಿರಗಳನ್ನು ಆಯೋಜನೆ ಮಾಡಲಾಗುತ್ತಿದೆ ಎಂದು ಹೇಳಿದರು.

ದೇಶದ ಪ್ರಜೆಗಳಾದ ನಾವೆಲ್ಲರೂ ಆರೋಗ್ಯವಂತರಾಗಿ ಇರುವುದು ನಮ್ಮೆಲ್ಲರ ಜವಾಬ್ದಾರಿ ಎಂದು ನಾವು ಭಾವಿಸಬೇಕು. ನಾವೆಲ್ಲರೂ ಸ್ವಾಸ್ಥರಿದ್ದಾಗ ಮಾತ್ರವೇ ದೇಶದ ಪ್ರಗತಿಗೆಕೊಡುಗೆ ನೀಡಲು ಸಾಧ್ಯವಿದೆ. ಹೀಗಾಗಿ, ಭಾರತವನ್ನು ವಿಶ್ವದ ಸರ್ವಶ್ರೇಷ್ಠ ದೇಶ ಮಾಡಲು ನಾವೆಲ್ಲರೂ ಮಾನಸಿಕ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿ ಇರಬೇಕಿದೆ. ಆರೋಗ್ಯವಂತ ಸಮಾಜವು ಆರೋಗ್ಯವಂತ ಚಿಂತನೆ, ಕಾರ್ಯಗಳಿಗೆ ಮುನ್ನುಡಿ ಬರೆಯುತ್ತದೆ ಎಂಬುದನ್ನು ನಾವೆಲ್ಲರೂ ಅರ್ಥ ಮಾಡಿಕೊಂಡು ನಮ್ಮ ಕುಟುಂಬ, ಊರು, ರಾಜ್ಯ, ದೇಶದ ಪ್ರಗತಿಗೆ ಶ್ರಮಾದಾನ ನೀಡಬೇಕು ಎಂದು ಕಿವಿಮಾತು ಹೇಳಿದರು.

ಮಕ್ಕಳೊಂದಿಗೆ ಸಂವಾದ: ಪ್ರಕೃತಿ ವಿದ್ಯಾಲಯದ ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳ ಜತೆಗೆ ಡಾ.ರವಿಕುಮಾರ್‌ಟಿ.ಜಿ ಸಂವಾದ ನಡೆಸಿದರು. ಶಾಲಾ ವಯಸ್ಸಿನ ಮಕ್ಕಳಲ್ಲಿನ ಆರೋಗ್ಯದ ತೊಂದರೆಗಳನ್ನು ಹೇಗೆ ನಿಭಾಯಿಸಬೇಕು ಎಂಬ ಬಗ್ಗೆ ತಿಳುವಳಿಕೆ ಮೂಡಿಸಿದರು. ನಂತರ, ವಿದ್ಯಾರ್ಥಿಗಳು ಕೇಳಿದ ಪ್ರಶ್ನೆಗಳು, ಸಂದೇಹಗಳನ್ನು ಕೇಳಿ, ಸಾಧ್ಯ ಪರಿಹಾರ ತಿಳಿಸಿದರು. ಉನ್ನತ ವ್ಯಾಸಾಂಗದ ಬಗ್ಗೆ ಹೇಗೆ ಸಿದ್ಧತೆ, ತಯಾರಿಇರಬೇಕು ಎಂಬ ಮಾಹಿತಿಗಳನ್ನೂ ನೀಡಿದರು.

ವಿದ್ಯಾಸಂಸ್ಥೆಯ ಕಾರ್ಯದರ್ಶಿ ಕೆ.ಜಿ. ರವಿಕುಮಾರ್, ಲೋಹಿತ್‌ಕುಮಾರ್, ಮುಖ್ಯೋಪಾಧ್ಯಾಯಎಸ್.ಆರ್. ಮನು ಸೇರಿದಂತೆಗ್ರಾಮದ ಮುಖಂಡರು ಇದ್ದರು.

## ಮಹಿಳೆಯರಿಗೆ ಅಕ್ಷರ ಕಲಿಸಿದ ಪುಲೆ ದೇಶದ ಪ್ರಪ್ರಥಮ ಶಿಕ್ಷಕಿ



» **ಚಿತ್ರದುರ್ಗ**

ಮಹಿಳೆಯರಿಗೆ ಅಕ್ಷರ ಕಲಿಸಿದ ಸಾವಿತ್ರಿಬಾಯಿ ಪುಲೆ ದೇಶದ ಪ್ರಪ್ರಥಮ ಶಿಕ್ಷಕಿ ಎಂದು ದಲಿತ ಮುಖಂಡ, ನಗರಸಭೆ ಮಾಜಿ ಉಪಾಧ್ಯಕ್ಷ ಡಿ.ದುರುಗೇಶಪ್ಪ ಹೇಳಿದರು. ಸ್ಲಂ ಜನಾಂದೋಲನ ಕರ್ನಾಟಕ ಜಿಲ್ಲಾ ಸಮಿತಿಯ ಹದಿನಾಲ್ಕನೆ ಸಂಸ್ಥಾಪನಾ ದಿನದ ಅಂಗವಾಗಿ ಪತ್ರಕರ್ತರ ಭವನದಲ್ಲಿ ಶನಿವಾರ ನಡೆದ ಸಾವಿತ್ರಿಬಾಯಿ ಪುಲೆರವರ 193 ನೇ ಜಯಂತಿ ಉದ್ಘಾಟಿಸಿ ಮಾತನಾಡಿದರು.ಅವಿದ್ಯಾವಂತೆಯಾಗಿದ್ದ ಸಾವಿತ್ರಿಬಾಯಿ ಪುಲೆಯನ್ನು ವಿವಾಹವಾದ ಜ್ಯೋತಿಬಾಪುಲೆ ಶಿಕ್ಷಣ ಕೊಡಿಸಿ ಶಿಕ್ಷಕಿಯನ್ನಾಗಿ ತಯಾರು ಮಾಡಿ ಆ ಮೂಲಕ ಶಿಕ್ಷಣದಿಂದ ವಂಚಿತರಾಗಿದ್ದ ಮಹಿಳೆಯರಿಗೆ ಶಿಕ್ಷಣ ಕೊಡಿಸುವ ಕೆಲಸ ಮಾಡಿದರು.ಪುರೋಹಿತಶಾಹಿಗಳು ಮಹಿಳೆಯರು ಶಿಕ್ಷಣ ಕಲಿಯಬಾರದು. ಕೇವಲ ಅಡುಗೆ ಮನೆಗಷ್ಟೆ ಸೀಮಿತವಾಗಿರಬೇಕೆನ್ನುತ್ತಿದ್ದ ಕಷ್ಟದ ಕಾಲದಲ್ಲಿ ಸಾವಿತ್ರಿಬಾಯಿ ಪುಲೆ ಎಲ್ಲ ವಿರೋಧಿಗಳನ್ನು ಮೆಟ್ಟಿನಿಂತು ಹೆಣ್ಣುಮಕ್ಕಳಿಗೆ ಶಿಕ್ಷಣ ಕಲಿಸಲು ಹೋಗುತ್ತಿದ್ದಾಗ ಮೇಲ್ಜಾತಿಯವರು ಸಗಣಿ, ಕಲ್ಲುಗಳನ್ನು ಎಸೆಯುತ್ತಿದ್ದರು. ಇಂತಹ ಅಪಮಾನಗಳನ್ನು ಸಹಿಸಿಕೊಂಡ ಸಾವಿತ್ರಿಬಾಯಿ ಪುಲೆ ಕೇವಲ ಶಿಕ್ಷಣಕ್ಕಷ್ಟೆ ಅಲ್ಲ. ಪ್ಲೇಗ್ ರೋಗಿಗಳ ಆರೈಕೆಯಲ್ಲೂ ತೊಡಗುತ್ತಿದ್ದರು. ಅಂತಹ ನಿಸ್ವಾರ್ಥ ಸೇವೆ ಸಲ್ಲಿಸುತ್ತಿದ್ದ ಸಾವಿತ್ರಿಬಾಯಿ ಪುಲೆಯನ್ನು ಪ್ರತಿಯೊಬ್ಬರು ಸ್ಮರಿಸಬೇಕಿದೆ ಎಂದು ತಿಳಿಸಿದರು.ದಲಿತ ಮುಖಂಡ ಬಿ.ರಾಜಪ್ಪ ಮಾತನಾಡಿ ದೇಶದ ಮೊಟ್ಟ ಮೊದಲ ಮಹಿಳಾ ಶಿಕ್ಷಕಿಯಾಗಿದ್ದ ಸಾವಿತ್ರಿಬಾಯಿ ಪುಲೆ ದೇಶದ ಉದ್ದಗಲಕ್ಕೂ ಸಂಚರಿಸಿ ಅನೇಕ ಕಡೆ ಶಾಲೆಗಳನ್ನು ತೆರೆದು ಶಿಕ್ಷಣದಿಂದ ವಂಚಿತರಾಗಿದ್ದ ಹೆಣ್ಣು ಮಕ್ಕಳನ್ನು ಅಕ್ಷರವಂತರನ್ನಾಗಿ ಮಾಡುತ್ತಾರೆ. ಇದನ್ನು ಕಂಡು ಸಹಿಸಿದ ಪುರೋಹಿತಶಾಹಿಗಳು ಸಾವಿತ್ರಿಬಾಯಿ ಪುಲೆ ಮಹಿಳೆಯರಿಗೆ ಶಿಕ್ಷಣ ಕಲಿಸಲು ಹೋಗುತ್ತಿದ್ದ ಸಂದರ್ಭದಲ್ಲಿ ಕಲ್ಲು, ಸಗಣಿಯನ್ನು ಮೈಮೇಲೆ ಎಸೆದಿದ್ದುಂಟು. ಎಲ್ಲವನ್ನು ಮೆಟ್ಟಿನಿಂತು ಹೆಣ್ಣು ಮಕ್ಕಳನ್ನು ಶಿಕ್ಷಣವಂತರನ್ನಾಗಿ ಮಾಡಿದ ಕೀರ್ತಿ ಸಾವಿತ್ರಿಬಾಯಿ ಪುಲೆರವರಿಗೆ ಸಲ್ಲಬೇಕು ಎಂದರು.



## ಎನ್‌ಎಂಎಂಎಸ್ ಪರೀಕ್ಷೆ: 124 ಗೈರು, 1298 ಹಾಜರ್

**ಚಳ್ಳಕೆರೆ:** ಪ್ರತಿವರ್ಷದಂತೆ ಈ ವರ್ಷವೂ ನಗರದ ಐದು ಪರೀಕ್ಷಾ ಕೇಂದ್ರಗಳಲ್ಲಿ ಎನ್‌ಎಂಎಂಎಸ್(ನ್ಯಾಷನಲ್ ಮೀನ್ಸ್ ಮೆರಿಟ್ ಸ್ಕಾಲರ್‌ಶೀಫ್) ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಲಾಯಿತು ಎಂದು ಪರೀಕ್ಷೆಯ ಮೇಲ್ವಿಚಾರಕ, ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು. ಅವರು, ಭಾನುವಾರ ನಗರದ ಒಟ್ಟು ಐದು ಕೇಂದ್ರಗಳಲ್ಲಿ ಪರೀಕ್ಷೆ ನಡೆಸಿದ್ದು ನಗರದ ಬಿಎಂ ಸರ್ಕಾರಿ ಪ್ರೌಢಶಾಲೆಯ ಪರೀಕ್ಷಾ ಕೊಠಡಿಗೆ ತೆರಳಿ ವೀಕ್ಷಿಸಿ ನಂತರ ಪತ್ರಿಕೆಗೆ ಮಾಹಿತಿ ನೀಡಿದರು. ಒಟ್ಟು 1422 ಅಭ್ಯರ್ಥಿಗಳು ಪರೀಕ್ಷೆಗೆ ದಾಖಲಾಗಿದ್ದು, ಆ ಪೈಕಿ 1298 ಅಭ್ಯರ್ಥಿಗಳು ಪರೀಕ್ಷೆ ಹಾಜರಾಗಿದ್ದು, 124 ವಿದ್ಯಾರ್ಥಿಗಳು ಗೈರುಹಾಜರಾಗಿದ್ದರು.

## ಪ್ರಮುಖ ಸುದ್ದಿ

### ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣಕ್ಕೆ ಜಿಲ್ಲಾಧಿಕಾರಿ ಭೇಟಿ

# ಕ್ರೀಡಾಂಗಣದಲ್ಲಿನ ಕುಂದುಕೊರತೆಗಳ ಶೀಘ್ರ ನಿವಾರಣೆಗೆ ತಾಕೀತು

» **ಚಿತ್ರದುರ್ಗ**

ನಗರದ ವೀರವನಿತೆ ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣಕ್ಕೆ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್. ಜೆ. ಅವರು ಭೇಟಿ ಮಾಡಿ, ಪರಿಶೀಲನೆ ನಡೆಸಿದರು. ಕ್ರೀಡಾಂಗಣದಲ್ಲಿರುವ ಕುಂದುಕೊರತೆಗಳನ್ನು ಶೀಘ್ರ ಪರಿಹರಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ತಾಕೀತು ಮಾಡಿದರು.





ಜಿಲ್ಲಾ ಕ್ರೀಡಾಂಗಣಕ್ಕೆ ಸಂಜೆ ವೇಳೆಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಇಲ್ಲಿಗೆ ವಾಯು ವಿಹಾರಕ್ಕೆ, ವಾಕಿಂಗ್ ಹಾಗೂ ವಿವಿಧ ಕ್ರೀಡೆಗಳ ಅಭ್ಯಾಸಕ್ಕೆಂದು ಬಂದಿದ್ದವರನ್ನು ಮಾತನಾಡಿಸಿ, ಕ್ರೀಡಾಂಗಣದಲ್ಲಿನ ಕುಂದುಕೊರತೆಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಕ್ರೀಡಾಂಗಣದಲ್ಲಿ ವಿದ್ಯುತ್ ದೀಪದ ಕೊರತೆ ಹಾಗೂ ಕುಡಿಯುವ ನೀರಿನ ಕೊರತೆ ಬಗ್ಗೆ ಮಾಹಿತಿ ಪಡೆದ ಜಿಲ್ಲಾಧಿಕಾರಿಗಳು, ಎರಡು ದಿನಗಳ ಒಳಗೆ ವಿದ್ಯುತ್ ದೀಪದ ವ್ಯವಸ್ಥೆ ಕೈಗೊಳ್ಳಲು ಸೂಚಿಸಿದರು, ಅಲ್ಲದೆ ಕ್ರೀಡಾಂಗಣದಲ್ಲಿ ಶುದ್ಧ ಕುಡಿಯುವ ನೀರು ಪೂರೈಸಲು ಅಗತ್ಯ ಕ್ರಮಕ್ಕಾಗಿ ತಾಕೀತು ಮಾಡಿದರು. ಕ್ರೀಡಾಂಗಣದಲ್ಲಿ ಬೆಳಗಿನ ಜಾವ ಹಾಗೂ ಸಂಜೆಯ ಹೊತ್ತಿನಲ್ಲಿ ವಾಕಿಂಗ್ ಗಾಗಿ ಬರುವವರ ಸಂಖ್ಯೆ ಹೆಚ್ಚಿದೆ. ಹೀಗಾಗಿ ವಾಕಿಂಗ್ ಮಾಡುವವರಿಗಾಗಿ ಪ್ರತ್ಯೇಕವಾಗಿ ವಾಕಿಂಗ್ ಪಥ ನಿರ್ಮಿಸಲು ಸೂಚನೆ ನೀಡಿದರು.

ವಿವಿಧ ಕ್ರೀಡೆಗಳ ಅಭ್ಯಾಸಕ್ಕಾಗಿ ಕ್ರೀಡಾಂಗಣಕ್ಕೆ ಬಂದಿದ್ದ ಯುವಜನರೊಂದಿಗೆ ಚರ್ಚಿಸಿದ ಜಿಲ್ಲಾಧಿಕಾರಿಗಳು, ವಿದ್ಯಾರ್ಥಿಗಳ ಅಭ್ಯಾಸಕ್ಕಾಗಿ ಹಾಗೂ ಕ್ರೀಡೆಗಳ ಅಭಿವೃದ್ಧಿಗೆ ಅಗತ್ಯವಿರುವ ಕ್ರೀಡಾ ಪರಿಕರಗಳ ಬಗ್ಗೆಯೂ ಅವರಿಂದ ಮಾಹಿತಿ ಪಡೆದುಕೊಂಡು, ಕ್ರೀಡಾಂಗಣಕ್ಕೆಅಗತ್ಯವಿರುವಪರಿಕರಗಳನ್ನು ಖರೀದಿಸುವಂತೆ ಹಾಗೂ ಅಗತ್ಯವಿರುವ ಅನುದಾನದ ಬಗ್ಗೆ ವರದ ಸಲ್ಲಿಸಲು ಸೂಚನೆ ನೀಡಿದರು.

ಬಳಿಕ ಕ್ರೀಡಾಂಗಣದ ಆವರಣದಲ್ಲಿರುವ ಒಳಾಂಗಣ ಈಜುಕೊಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿಗಳು, ಈಜುಕೊಳ ಸಾರ್ವಜನಿಕರ ಸೇವೆಗೆ ಶೀಘ್ರ ಲಭ್ಯವಾಗುವಂತೆ ಮಾಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ವಿನಾಕಾರಣ ನೆಪಗಳನ್ನು ಹೇಳಿಕೊಂಡು ತಡ ಮಾಡದಂತೆ ಅಧಿಕಾರಿಗಳಿಗೆ ತಾಕೀತು ಮಾಡಿದರು.ಜಿ.ಪಂ. ಸಿಇಒ ಸೋಮಶೇಖರ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಸುಚೇತನ ನೆಲವಿಗಿ ಸೇರಿದಂತೆ ಕ್ರೀಡಾಂಗಣದ ವಿವಿಧ ಸಿಬ್ಬಂದಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಉಚಿತ ತರಬೇತಿ




» **ಚಿತ್ರದುರ್ಗ**

ಸರಸ್ವತಿಪುರಂನಲ್ಲಿರುವ ಜಂಬೂದ್ವೀಪ ಕರ್ನಾಟಕ ಮಹಾತ್ಮಫುಲೆ ಅಧ್ಯಯನ ಕೇಂದ್ರದಲ್ಲಿ ರಾಜ್ಯ ಲೋಕಸೇವಾ ಆಯೋಗಗಳ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ನೀಡಲಾಗುತ್ತಿದೆ.ಕೆ.ಎ.ಎಸ್. ಪಿ.ಎಸ್.ಐ. ಪಿ.ಡಿ.ಓ. ಎಸ್.ಡಿ.ಎ. ಎಫ್.ಡಿ.ಎ. ಬ್ಯಾಂಕಿಂಗ್ ಪರೀಕ್ಷೆಗಳಿಗೆ ಐದು ತಿಂಗಳ ಕಾಲ ಉಚಿತ ತರಬೇತಿ ನೀಡಲಾಗುತ್ತದೆ. ಸಂಜೆ ತರಗತಿಗಳು ವಾರದಲ್ಲಿ ನಾಲ್ಕು ದಿನ. ಸೋಮವಾರ, ಮಂಗಳವಾರ, ಬುಧವಾರ ಸಂಜೆ 5 ರಿಂದ 8 ಗಂಟೆಯತನಕ.ಭಾನುವಾರ ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ.ರೆಗ್ಯುಲರ್ ತರಗತಿಗಳು ಸೋಮವಾರ, ಮಂಗಳವಾರ, ಬುಧವಾರ ಬೆಳಿಗ್ಗೆ 9 ರಿಂದ ಮಧ್ಯಾಹ್ನ 3 ಗಂಟೆಯತನಕ.ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ಬೋಧನೆ ಮತ್ತು ಮಾರ್ಗದರ್ಶನ. ವೈಯಕ್ತಿಕ ನಿಗಾವಹಿಸುವಿಕೆ, ಸುಸಜ್ಜಿತವಾದ ಗ್ರಂಥಾಲಯ ಸೌಲಭ್ಯ, ವಾರಕ್ಕೊಮ್ಮೆ ಅಣಕು ಪರೀಕ್ಷೆ, ಪ್ರತಿಭಾವಂತ ಬಡ ವಿದ್ಯಾರ್ಥಿಗಳಿಗೆ ಉಚಿತ ಮೂರು ದಿನಗಳ ಕೋಚಿಂಗ್ ಇರುತ್ತದೆ.

ಎಲ್ಲಾ ವರ್ಗದ ಪದವೀಧರರು, ಅಂತಿಮ ವರ್ಷದ ಪದವಿ ವ್ಯಾಸಂಗ ಮಾಡುತ್ತಿರುವ ಪ್ರತಿಭಾವಂತ 25 ಬಡ ವಿದ್ಯಾರ್ಥಿಗಳಿಗೆ ಪ್ರವೇಶ ಉಚಿತ.ಹೆಚ್ಚಿನ ಮಾಹಿತಿಗಾಗಿ ಮೊ : 9242843504, 9740108588, 9972446430 ಸಂಖ್ಯೆಗಳನ್ನು ಸಂಪರ್ಕಿಸಬಹುದಾಗಿದೆ.

### ತರಬೇತಿ ಶಿಬಿರಕ್ಕೆ ಅರ್ಜಿ ಆಹ್ವಾನ

▪ **ಚಿತ್ರದುರ್ಗ**

2023–24ನೇ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪರಿಶಿಷ್ಟ ಜಾತಿ ಉಪಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಯುವ ಜನರಿಗೆ ಅನುಷ್ಠಾನಗೊಳಿಸಲಿರುವ ತರಬೇತಿ ಶಿಬಿರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಜನವರಿ 18 ಅರ್ಜಿ ಸಲ್ಲಿಸಲು ಕೊನೆಯ ದಿನ. ಯುವ ಜನರಿಗಾಗಿ ಪೂರಕವಾದ ಉದ್ಯೋಗಗಳ ವಿಪುಲ ಅವಕಾಶವಿದ್ದು, ಅದರಂತೆ ಪರಿಶಿಷ್ಟ ಜಾತಿ ಯುವಜನರಿಗಾಗಿ ಪ್ರಸಕ್ತ ಸಾಲಿನಲ್ಲಿ ದ್ವಿತೀಯ ಪಿ.ಯು.ಸಿ ವಿದ್ಯಾರ್ಹತೆ ಹೊಂದಿದ 16 ರಿಂದ 30 ವರ್ಷ ವಯೋಮಿತಿಯವರಿಗೆ 2024ರ ಜನವರಿ 24 ರಿಂದ ಫೆಬ್ರವರಿ 7 ರವರೆಗೆ 15 ದಿನಗಳ ಕಾಲ ಜಿಮ್, ಫಿಟ್ನೆಸ್ ತರಬೇತಿ ಶಿಬಿರ ನಡೆಯಲಿದೆ. ಎಸ್‌ಎಸ್‌ಎಲ್‌ಸಿ ಪಾಸ್ ಅಥವಾ ಫೇಲ್ ಆದ 15 ರಿಂದ 29 ವರ್ಷ ವಯೋಮಿತಿಯವರೆಗೆ 2024ರ ಜನವರಿ 24 ರಿಂದ ಫೆಬ್ರವರಿ 7 ರವರೆಗೆ 15 ದಿನಗಳ ಕಾಲ ಬ್ಯೂಟಿಷಿಯನ್ ತರಬೇತಿ ಶಿಬಿರ ನಡೆಯಲಿದೆ. ದ್ವಿತೀಯ ಪಿಯು ವಿದ್ಯಾರ್ಹತೆ ಹೊಂದಿದ 15 ರಿಂದ 29 ವರ್ಷ ವಯೋಮಿತಿಯವರಿಗೆ 2024ರ ಜನವರಿ 27 ರಿಂದ ಫೆಬ್ರವರಿ 7 ರವರೆಗೆ 12 ದಿನಗಳ ವರರೆಗೆ ವೀಡಿಯೋಗ್ರಫಿ ತರಬೇತಿ ಶಿಬಿರ ನಡೆಯಲಿದೆ. ಪದವಿ ಹಾಗೂ ಪತ್ರಿಕೋದ್ಯಮ ಪದವಿ ಪಡೆದ 15 ರಿಂದ 29 ವರ್ಷ ವಯೋಮಿತಿಯವರೆಗೆ 2024ರ ಜನವರಿ 31 ರಿಂದ ಫೆಬ್ರವರಿ 7 ರವರೆಗೆ 8 ದಿನಗಳ ಕಾಲ ನಿರೂಪಣಾ ಮತ್ತು ವಾರ್ತಾ ವಾಚಕರ ತರಬೇತಿ ಶಿಬಿರ ನಡೆಯಲಿದೆ. ತರಬೇತಿ ಶಿಬಿರಗಳಿಗೆ ಅರ್ಜಿ ಸಲ್ಲಿಸಲು ಪರಿಶಿಷ್ಟ ಜಾತಿಯ ಯುವ ಜನರು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಚೇರಿಯಿಂದ ಅರ್ಜಿ ಪಡೆದು ಜನವರಿ 18 ರೊಳಗೆ ಕಚೇರಿಗೆ ಸಲ್ಲಿಸಬೇಕು. ತರಬೇತಿ ಶಿಬಿರವನ್ನು ಬೆಂಗಳೂರಿನ ಕೇಂದ್ರ ಕಚೇರಿಯಲ್ಲಿ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ 08194–235635 ಗೆ ಸಂಪರ್ಕಿಸಬಹುದು ಎಂದು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ತರಬೇತಿ ಕಾರ್ಯಕ್ರಮ ಮುಂದೂಡಿಕೆ

▪ **ಚಿತ್ರದುರ್ಗ**

ಧಾರವಾಡ ಕೃಷಿ ವಿಶ್ವವಿದ್ಯಾಲಯ, ಚಳ್ಳಕೆರೆಯ ಭಾರತೀಯ ವಿಜ್ಞಾನ ಸಂಸ್ಥೆ–ಸೊಸೈಟಿ ಫಾರ್ ಇನ್ನೋವೇಷನ್ ಅಂಡ್ ಡೆವಲಪ್‌ಮೆಂಟ್ ಇವರ ಸಂಯುಕ್ತಾಶ್ರಯದಲ್ಲಿ ಇದೇ ಜನವರಿ 8 ರಿಂದ 12 ರವರೆಗೆ ನಡೆಯಬೇಕಿದ್ದ ಬಾಳೆದಿಂಡಿನಿಂದ ನಾರು ಸಂಸ್ಕರಣೆ ಮತ್ತು ಮೌಲ್ಯವರ್ಧಿತ ಉತ್ಪನ್ನಗಳ ಕೌಶಲ್ಯ ಅಭಿವೃದ್ಧಿ ತರಬೇತಿ ಕಾರ್ಯಾಗಾರವನ್ನು ಕಾರಣಾಂತರಗಳಿಂದ ಇದೇ ಜನವರಿ 16 ರಿಂದ 20ಕ್ಕೆ ಮುಂದೂಡಲಾಗಿದೆ.ತರಬೇತಿ ಕಾರ್ಯಕ್ರಮವನ್ನು ಜಿಲ್ಲೆಯ ರೈತರು, ಬಾಳೆ ಬೆಳೆಗಾರರು, ಸ್ವಯಂ ಉದ್ಯೋಗದಲ್ಲಿ ಆಸಕ್ತಿ ಉಳ್ಳವರು ಮತ್ತು ಕುಶಲಕರ್ಮಿಗಳಿಗಾಗಿ ಆಯೋಜಿಸಲಾಗಿದೆ. ಇದು ಐದು ದಿನಗಳ ತರಬೇತಿ ಕಾರ್ಯಾಗಾರವಾಗಿದ್ದು, ಇದೇ ಜನವರಿ 16 ರಿಂದ 20 ರವರೆಗೆ ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಇಚ್ಛಿಸುವವರು ಇದೇ ಜನವರಿ 10 ರೊಳಗೆ ಗಣೇಶ್ ತೋಳಾರ್ ಅವರ ದೂರವಾಣಿ ಸಂಖ್ಯೆ 7349695100 ಹಾಗೂ ಕೋಟೇಶ್ ಕೊರವರ ಅವರ ದೂರವಾಣಿ ಸಂಖ್ಯೆ 9663364234 ಗೆ ಕರೆ ಮಾಡಿ ತಮ್ಮ ಹೆಸರನ್ನು ನೋಂದಾಯಿಸಬಹುದು.

# ರಾಜ್ಯದ ಗಮನ ಸೆಳೆದ ಹ್ಯಾಂಡ್‌ಬಾಲ್ ತಂಡ

» **ಚಿತ್ರದುರ್ಗ**

ಹ್ಯಾಂಡ್‌ಬಾಲ್ ಕ್ರೀಡೆಯಲ್ಲಿ ನಮ್ಮ ಜಿಲ್ಲೆಯ ಕ್ರೀಡಾಪಟುಗಳು ರಾಜ್ಯದಲ್ಲಿ ಚಿತ್ರದುರ್ಗ ಜಿಲ್ಲೆಯನ್ನು ನೋಡುವಂತೆ ಆಟವನ್ನು ಆಡಿದ್ದಾರೆ. ಹಲವಾರು ರಾಷ್ಟ್ರ ಮತ್ತು ರಾಜ್ಯ ಮಟ್ಟದ ಪಂದ್ಯಾವಳಿಯಲ್ಲಿ ಭಾಗವಹಿಸಿದ ಕೀರ್ತಿ ನಮ್ಮ ಕ್ರೀಡಾಪಟುಗಳಿಗೆ ಇದೆ ಎಂದು ಚಿತ್ರದುರ್ಗ ಜಿಲ್ಲಾ ಹ್ಯಾಂಡ್‌ಬಾಲ್ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಕೆ.ಹೆಚ್.ಶಿವರಾಮು ತಿಳಿಸಿದ್ದಾರೆ.

ಜನವರಿ 09 ರಿಂದ ಜನವರಿ 13ರವರೆಗೆ ರಾಜಸ್ಥಾನದ ಕರೋಲಿಯಲ್ಲಿ ನಡೆಯುವ 20 ವರ್ಷದೊಳಗಿನ ಬಾಲಕರ ವಿಭಾಗದ 46ನೇ ರಾಷ್ಟ್ರೀಯ ಹ್ಯಾಂಡ್‌ಬಾಲ್‌ನಲ್ಲಿ ಭಾಗವಹಿಸುತ್ತಿರುವ ಚಿತ್ರದುರ್ಗದ ಜಿಲ್ಲಾ ಹ್ಯಾಂಡ್‌ಬಾಲ್‌ಸಂಸ್ಥೆಯಕ್ರೀಡಾಪಟುಗಳಿಗೆ ನಗರದ ವಿ.ಪಿ.ಬಡಾವಣೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಹಮ್ಮಿಕೊಂಡಿದ್ದ ಸನ್ಮಾನ ಮತ್ತು ಬೀಳ್ಕೊಡುಗೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಚಿತ್ರದುರ್ಗ ನಗರದಲ್ಲಿ ಕಳೆದ 23 ವರ್ಷಗಳ ಹಿಂದೆ ಹಲವಾರು ಕ್ರೀಡೆಗಳು ನಡೆಯುತ್ತಿದ್ದ ಸಮಯದಲ್ಲಿ ಹ್ಯಾಂಡ್ ಬಾಲ್‌ನ್ನು ಪ್ರಾರಂಭ ಮಾಡಲಾಯಿತು. ಅಲ್ಲಿಂದ ಇಲ್ಲಿಯವರೆಗೂ ನಮ್ಮ ಸಂಸ್ಥೆಯ ಹಲವಾರು ಕ್ರೀಡಾಪಟುಗಳು ರಾಜ್ಯ ಮತ್ತು ರಾಷ್ಟ್ರಮಟ್ಟವನ್ನುಪ್ರತಿನಿಧಿಸಿದ್ದಾರೆ. ಇದರಲ್ಲಿ ಹಲವಾರು ಕ್ರೀಡಾಪಟುಗಳು ನೇರವಾಗಿ ಸರ್ಕಾರಿ ಉದ್ಯೋಗವನ್ನು ಪಡೆದಿದ್ದಾರೆ.



450ಕ್ಕೂ ಹೆಚ್ಚು ಕ್ರೀಡಾಪಟುಗಳು ಹಲವಾರು ಕ್ರೀಡಾಕೂಟಗಳಲ್ಲಿ ಭಾಗವಹಿಸಿದ್ದಾರೆ. ಇದರಲ್ಲಿ 50ಕ್ಕೂ ಹೆಚ್ಚು ಜನ ವೈದ್ಯಕೀಯ ಕೋರ್ಸ್ ಪ್ರವೇಶವನ್ನು ಪಡೆದಿದ್ದಾರೆ. 60ಕ್ಕೂ ಹೆಚ್ಚು ಕ್ರೀಡಾಪಟುಗಳು ಸರ್ಕಾರದ ತಲಾ 1 ಲಕ್ಷ ರೂಗಳ ಸಹಾಯಧನವನ್ನು ಪಡೆದಿದ್ದಾರೆ ಎಂದರು.

ಚಿತ್ರದುರ್ಗ ಜಿಲ್ಲಾ ಹ್ಯಾಂಡ್‌ಬಾಲ್ ಸಂಸ್ಥೆ ತನ್ನ 23 ವರ್ಷದಲ್ಲಿ ಹಲವಾರು ಕ್ರೀಡಾಪಟುಗಳನ್ನು ಹುಟ್ಟು ಹಾಕುವುದರ ಮೂಲಕ ಬಡ ಮಕ್ಕಳಿಗೆ ಶಿಕ್ಷಣದ ಜೊತೆಗೆ ಕ್ರೀಡೆಯೂ ಸಹಾ ಅಗತ್ಯ ಎಂದು ತೋರಿಸಿಕೊಟ್ಟಿದೆ. ಮಕ್ಕಳಲ್ಲಿ ಪ್ರತಿಭೆ ಇರುತ್ತದೆ ಅದನ್ನು ಗುರುತಿಸುವ ಕಾರ್ಯವನ್ನು ಶಿಕ್ಷಕರುಗಳಾದ ನಾವುಗಳು ಮಾಡಬೇಕಿದೆ ಆಗ ಮಾತ್ರ ಪ್ರತಿಭೆ ಬೆಳಕಿಗೆ ಬರಲು ಸಾಧ್ಯವಿದೆ ಎಂದು ಶಿವರಾಂ ತಿಳಿಸಿದರು. ಸಂಸ್ಥೆಯ ಉಪಾಧ್ಯಕ್ಷರು. ಎಂ.ಹೆಚ್.ಜಯಣ್ಣ ಮಾತನಾಡಿ, ಇಂದಿನ ಕಾರ್ಯಕ್ರಮ ವಿದ್ಯಾರ್ಥಿಗಳಾದ ಕ್ರೀಡಾಪಟುಗಳಿಗೆ ಪ್ರೋತ್ಸಹ ನೀಡುವಂತ ಕಾರ್ಯಕ್ರಮವಾಗಿದೆ. ಮಕ್ಕಳಿಗೆ ಇಂತಹ ಶಿಕ್ಷಕರು ಸಿಗುವುದು ಸಹಾ ಕಷ್ಟವಾಗುತ್ತದೆ. ಇಲ್ಲಿನ ಶಿಕ್ಷಕರು ಮಕ್ಕಳ ಶ್ರಯೋಲಾಭಿಲಾಷೆಯನ್ನು ಬಯಸುವವರಾಗಿದ್ದಾರೆ. ಮಕ್ಕಳ ಕಷ್ಟದಲ್ಲಿಯೂ ಸಹಾ ಶಿಕ್ಷಕರು ಭಾಗಿಯಾಗುವುದರ ಮೂಲಕ ಪರಿಹಾರವನ್ನು ಕಂಡುಕೊಡಲಿದ್ದಾರೆ ಎಂದರು. ಸಂಸ್ಥೆಯ ಖಜಾಂಚಿ ಸಿ.ಎಸ್.ಪ್ರೇಮಾನಂದ್ ಮಾತನಾಡಿ, ಚಿತ್ರದುರ್ಗದಲ್ಲಿ ಹ್ಯಾಂಡ್‌ಬಾಲ್ ಪ್ರಾರಂಭವಾಗಿಕೆಲವೇದಿನಗಳಲ್ಲಿನ್ಯಾಷನಲ್ ಕ್ರೀಡಾಕೂಟವನ್ನು ನಡೆಸಲಾಯಿತು. ಹಲವಾರು ತರಬೇತಿ ತಂಡಗಳು ಮಕ್ಕಳಿಂದ ಹಣವನ್ನು ಪಡೆಯುತ್ತಾರೆ, ಆದರೆ ಶಿವರಾಂರವರು ಮಕ್ಕಳಿಂದ ಯಾವುದೇ ರೀತಿಯ ಹಣವನ್ನು ಪಡೆಯದೆ ತಾವೇ ಸ್ವತ ಹಣವನ್ನು ಹಾಕುವುದರ ಮೂಲಕ ಮಕ್ಕಳನ್ನು ತರಬೇತಿ ನೀಡುತ್ತಿದ್ದಾರೆ. ಅಲ್ಲದೆ ಮಕ್ಕಳ ಬಗ್ಗೆ ಕಾಳಜಿಯನ್ನು ಸಹಾ ವಹಿಸುತ್ತಾರೆ. ಇಲ್ಲಿ ತರಬೇತಿಯನ್ನು ಪಡೆದ ಹಲವಾರು ಮಕ್ಕಳು ಉನ್ನತವಾದ ಸ್ಥಾನವನ್ನು ಪಡೆದಿದ್ದಾರೆ. ಶಿವರಾಂರವರು ಹ್ಯಾಂಡ್‌ಬಾಲ್‌ಗೆ ತಮ್ಮನ್ನು ತಾವು ಸಮರ್ಪಿಸಿಕೊಂಡಿದ್ದಾರೆ ಎಂದರು.

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರಾದ ಸುರೇಶ್ ಮಾತನಾಡಿ, ಶಿವರಾಂರವರು ತಮ್ಮ ಮಕ್ಕಳಿಗಿಂತ ಶಾಲೆಯ ಮಕ್ಕಳ ಬಗ್ಗೆ ಹೆಚ್ಚಿನ ಕಾಳಜಿಯನ್ನು ವಹಿಸುತ್ತಾರೆ ಆವರ ಆಟ–ಪಾಠದ ಬಗ್ಗೆ ಗಮನ ನೀಡುವುದರ ಮೂಲಕ ಅವರ ಅಭೀವೃದ್ದಿಯನ್ನು ಬಯಸಿದ್ದಾರೆ. ಮಕ್ಕಳಲ್ಲಿ ಕ್ರೀಡಾ ಮನೋಭಾವ ಬರುವಂತೆ ಮಾಡಿದ್ದಾರೆ. ಶಿವರಾಂರವರು ಕ್ರೀಡಾ ಕ್ಷೇತ್ರದಲ್ಲಿ ಶಕ್ತಿಯಾಗಿ ರೂಪುಗೊಂಡಿದ್ದಾರೆ. ಶ್ರಮ ಹಾಲಿ ಹ್ಯಾಂಡ್ ಬಾಲ್ ತಂಡವನ್ನು ಕಟ್ಟಿದ್ದಾರೆ, ಅದರ ಬೆಳವಣಿಗೆಯಲ್ಲಿ ಶಿವರಾಂರವರ ಪಾತ್ರ ಹೆಚ್ಚಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಜಮ್ಮು–ಕಾಶ್ಮೀರದ ಶ್ರೀನಗರದಲ್ಲಿ ನಡೆದ ರಾಷ್ಟ್ರೀಯ ಹ್ಯಾಂಡ್ ಬಾಲ್ ಪಂದ್ಯಾವಳಿಯಲ್ಲಿ ಭಾಗವಹಿಸಿ ಪ್ರಸುತ್ತ ಅಖಿಲ ಭಾರತ ವಿಶ್ವ ವಿದ್ಯಾಲಯದ ಹ್ಯಾಂಡ್ ಬಾಲ್ ಪಂದ್ಯಾವಳಿಗೆ ಆಯ್ಕೆಯಾಗಿರುವ ಸಾವಂತ್ ಹಿಮಗಿರಿ, ಜನವರಿ 09 ರಿಂದ ಜನವರಿ 13ರವರೆಗೆ ರಾಜಸ್ಥಾನದ ಕರೋಲಿಯಲ್ಲಿ ನಡೆಯುವ 20 ವರ್ಷದೊಳಗಿನ ಬಾಲಕರ ವಿಭಾಗದ 46ನೇ ರಾಷ್ಟ್ರೀಯ ಹ್ಯಾಂಡ್‌ಬಾಲ್‌ನಲ್ಲಿ ಭಾಗವಹಿಸುತ್ತಿರುವ ಈ.ಕುಮಾರ್ ಮತ್ತು ವಿ.ಶ್ರೀನಿವಾಸ್ ರವರನ್ನು ಸನ್ಮಾನಿಸಿ ಬೀಳ್ಕೊಡಲಾಯಿತು.

# 2ನೇ ವರ್ಷದ ಆಂಜನೇಯ ಕಾರ್ತಿಕೋತ್ಸವ

» **ನಾಯಕನಹಟ್ಟಿ**

ಹೋಬಳಿಯ ಎರಡನೇ ವರ್ಷದ ಆಂಜನೇಯ ಕಾರ್ತಿಕೋತ್ಸವ ಸಹಸ್ರಾರು ಭಕ್ತಾದಿಗಳ ಸಮ್ಮುಖದಲ್ಲಿ ಶನಿವಾರ ವೈಭವದಿಂದ ಜರಗಿತು

ರಥವನ್ನು ಬಣ್ಣ ಬಣ್ಣದ ಬಟ್ಟೆ ಹೂವಿನ ಅಲಂಕಾರಗಳಿಂದ ಮಾಡಲಾಯಿತು. ಆಂಜನೇಯ ದೇವಸ್ಥಾನದಿಂದ ಪಾದ ಗಟ್ಟೆವರೆಗೂ ರಥೋತ್ಸವ ಎಳೆಯಲಾಯಿತು. ಗ್ರಾಮದ ಮುಖ್ಯ ಬೀದಿಗಳಲ್ಲಿ ಕಲಾತಂಡ ಕೋಲಾಟ ನಂದಿಕೋಲು ಗಮನ ಸೆಳೆದವು.



ಆಂಜನೇಯ ರಥೋತ್ಸವದ ಮುಕ್ತಿ ಬಾವುಟವನ್ನು 1 ಲಕ್ಷ ರೂಪಾಯಿ ಮಾಜಿ ಗ್ರಾಮ ಪಂಚಾಯತಿ ಅಧ್ಯಕ್ಷಮತ್ತು ಹಾಲಿ ಸದಸ್ಯ ಬಂಡೆ ಕೊಪ್ಪಲೇ ಓಬಣ್ಣ ಮುಕ್ತಿ ಬಾವುಟವನ್ನು ಹಾರಜ್ ಕೂಗಿಕೊಂಡರು.ಈಸಂದರ್ಭದಲ್ಲಿಉಪಸ್ಥಿತರಾದ ನಿವೃತ್ತ ಇಂಜಿನಿಯರ್ ಹಾಗೂ ಚಲನಚಿತ್ರದ ನಿರ್ಮಾಪಕರು ಈ, ದೊಡ್ಡ ನಾಗಯ್ಯ, ಲಕ್ಷ್ಮೀ ಮಹಾದೇವಣ್ಣ ಉಪಾಧ್ಯಕ್ಷರು ತಿಮ್ಮಪ್ಪನಹಳ್ಳಿ ಗ್ರಾಮ ಪಂಚಾಯತಿ,ಪರಮೇಶ್ವರಪ್ಪ ಮಾಜಿ ಉಪಾಧ್ಯಕ್ಷರು, ಗೀತಮ್ಮ ಗ್ರಾಮ ಪಂಚಾಯತಿ ಸದಸ್ಯರದ ಸೋಮಶೇಖರ್, ಮಹಾದೇವಯ್ಯ ನಿವೃತ್ತ ಕೃಷಿ ಇಲಾಖೆ ಅಧಿಕಾರಿ,ಆನಂದ ಆರೋಗ್ಯ ಇಲಾಖೆ ಮತ್ತು ನೌಕರ ಸಂಘದ ಅಧ್ಯಕ್ಷರು ಮೊಳಕಾಲ್ಮೂರು ತಾಲೂಕು ಘಟಕ , ಚೆನ್ನಮಲ್ಲಯ್ಯ ಹಾಗೂ ಗ್ರಾಮ ಪಂಚಾಯತಿ ಸದಸ್ಯರುಗಳು ಮತ್ತು ಅಧ್ಯಕ್ಷರು ಮತ್ತು ನಾಯಕನಹಟ್ಟಿ ಪ್ರಭುಸ್ವಾಮಿ, ಸುನಿಲ್ ಕುಮಾರ್, ಊರಿನ ಮುಖಂಡರು ಗ್ರಾಮಸ್ಥರು,ಯುವಕರು ಮಹಿಳೆಯರು, ಇದ್ದರು.

## ತಂಬಾಕು ಮಾರಾಟಕ್ಕೆ ಪರವಾನಗಿ ಕುರಿತು ಅಧಿಕಾರಿಗಳಿಗೆ ತರಬೇತಿ



» **ದಾವಣಗೆರೆ**

ಜಿಲ್ಲೆಯ ಎಲ್ಲಾ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಧೂಮಪಾನ ನಿಷೇಧಿತ ಪ್ರದೇಶ ಎಂಬ ನಾಮಫಲಕವನ್ನು ಕಡ್ಡಾಯವಾಗಿ ಅಳವಡಿಸುವಂತೆ ಎಲ್ಲಾ ಠಾಣೆಯ ಪೊಲೀಸ್ ಅಧಿಕಾರಿಗಳಿಗೆ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಸೂಚಿಸಿದರು

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ನಗರ ವ್ಯಾಪ್ತಿಯಲ್ಲಿ ತಂಬಾಕು ಮಾರಾಟಕ್ಕೆ ಪರವಾನಗಿ ಕುರಿತು ಪೊಲೀಸ್ ಅಧಿಕಾರಿಗಳಿಗೆ ತರಬೇತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿವರ್ಷದ ಆರಂಭಿಕವಾಗಿ ತರಬೇತಿಯನ್ನು ಆಯೋಜಿಸಿದ್ದು ಕಳೆದ ವರ್ಷಕ್ಕಿಂತ ಪ್ರಸ್ತುತ ವರ್ಷದಲ್ಲಿ ಹೆಚ್ಚು ಪ್ರಕರಣಗಳನ್ನು ದಾಖಲಿಸಿ ಸಾರ್ವಜನಿಕರು ಕಂಡ–ಕಂಡಲ್ಲಿ ಧೂಮಪಾನ ಮಾಡದಂತೆ ಸೂಕ್ತ ಕ್ರಮ ವಹಿಸಿ ದಂಡ ವಿಧಿಸಿ ಕೋಟ್ಪಾ ಕಾಯ್ದೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಈ ತರಬೇತಿ ಮುನ್ನುಡಿಯಾಗಬೇಕು ಎಂದರು.ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ರಾಘವನ್ ಜಿ.ಡಿ ಮಾತಾನಾಡಿ, ತಂಬಾಕು ಬಳಸುವವರ ಸಂಖ್ಯೆ ಪ್ರಪಂಚದಲ್ಲಿಯೇ 2 ನೇ ರಾಷ್ಟ್ರವಾಗಿದ್ದು, ಅದರಲ್ಲಿ ಶೇ.28.6 ರಷ್ಟು ತಂಬಾಕು ಬಳಕೆದಾರರಿದ್ದು ಪುರುಷರು ಶೇ.42.4 ಮಹಿಳೆಯರು 14.2 ರಷ್ಟು ಬಳಕೆ ಮಾಡುತ್ತಿದ್ದು ಭಾರತದಾದ್ಯಂತ ಪ್ರತಿ ವರ್ಷ 15 ಲಕ್ಷ ಜನ ಸಾವನ್ನಪ್ಪುತ್ತಿದ್ದಾರೆ ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ತಂಬಾಕು ಉತ್ಪನ್ನ ಮಾರಾಟಗಾರರಿಗೆ ಪರವಾನಗಿ ನೀತಿಯನ್ನು ಜಾರಿಗೊಳಿಸಿ ಎಲ್ಲೇಂದರಲ್ಲಿ ತಂಬಾಕು ಮಾರಾಟ ಆಗದಂತೆ ಕಟ್ಟುನಿಟ್ಟಾಗಿ ಕೋಟ್ಪಾ ಕಾಯ್ದೆಯನ್ನು ಅನುಷ್ಠಾನಗೊಳಿಸಿ ಮಕ್ಕಳಿಗೆ ತಂಬಾಕು ಉತ್ಪನ್ನಗಳು ಸಿಗದಂತೆ ನಿಯಂತ್ರಿಸಿ ಯುವಕರು ತಂಬಾಕಿಗೆ ದಾಸರಾಗಿ ಬಲಿಯಾಗದಂತೆ ನೋಡಿಕೊಳ್ಳುವುದು ನಮ್ಮ–ನಿಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಪ್ರಸ್ತಾವಿಕವಾಗಿ ಮಾತನಾಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ॥ ಷಣ್ಮುಖಪ್ಪ.ಎಸ್. ಮಾತನಾಡಿ ಧೂಮಪಾನ ಮಾಡುವ ವ್ಯಕ್ತಿಗಳು ಶೇಕಡಾ 40 ರಷ್ಟು ಕ್ಷಯರೋಗಕ್ಕೆ ಒಳಗಾಗುವ ಸಾಧ್ಯತೆ ಇರುತ್ತದೆ.

## ಇಂದಿನಿಂದಲೇ ಅಭ್ಯಾಸ ಮಾಡಿ ಉತ್ತಮ ಅಂಕ ಪಡೆಯಿರಿ: ಶಾಸಕ

» **ಚನ್ನಗಿರಿ**

ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಾರ್ಷಿಕೋತ್ಸವ ಸಮಾರಂಭದಲ್ಲಿ ಬಸವರಾಜು ವಿ ಶಿವಗಂಗಾ ಭಾಗವಹಿಸಿ ಮಕ್ಕಳಿಗೆ ಮುಂಬರುವ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳು ಒಳ್ಳೆಯ ಅಂಕಗಳನ್ನು ಗಳಿಸಿ ಈ ಬಾರಿಯ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಚನ್ನಗಿರಿ ತಾಲೂಕು ಜಿಲ್ಲೆಯಲ್ಲಿ ಪ್ರಥಮ ಸ್ಥಾನವನ್ನು ಗಳಿಸಲಿ ಎಂದು ಆಶಿಸಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು, ಮೊದಲಿನಿಂದಲೂ ಪರೀಕ್ಷೆಗೆ ತಯಾರಿ ಮಾಡಿಕೊಳ್ಳಬೇಕು, ಪರೀಕ್ಷೆ ಹತ್ತಿರವಿದ್ದಾಗ ಸಿದ್ದವಾಗುವುದು ಸರಿಯಲ್ಲ ಎಂದರು. ಕಾರ್ಯಕ್ರಮದಲ್ಲಿ ಕಾಲೇಜಿನ ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರು ಸದಸ್ಯರು ಪ್ರಾಂಶುಪಾಲರು ಹಾಗೂ ಸಿಬ್ಬಂದಿ ವರ್ಗ ನಮ್ಮ ಕಾಲೇಜಿನ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.



**ಪ್ರಮುಖ ಸುದ್ದಿ**

# ಅಂಬೇಡ್ಕರ್ ಚಿಂತನೆಯಿಂದ ಸಮಾಜದಲ್ಲಿ ಸಾಮರಸ್ಯ

» **ಚಳ್ಳಕೆರೆ**

ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಭವಿಷ್ಯದ ಚಿಂತನೆಗಳ ಬಗ್ಗೆ ಜಾಗೃತಿ ಮೂಡಿಸುವ ನಾಯಕರಾಗಿದ್ದರು. ಅವರಲ್ಲಿ ಸಮಾಜ, ದೇಶಸ ಹಾಗೂ ಶೋಷಿತ ಸಮುದಾಯದ ಅಭಿವೃದ್ಧಿ ವಿಶೇಷ ಚಿಂತನೆ ನಡೆಸಿದರು. ಸಮಾಜದಲ್ಲಿ ಆಳಾವಾಗಿ ಬೇರೂರಿದ್ದ ಜಾತಿವರ್ಗ, ಸಂಘರ್ಷ ಕಂಟಕವನ್ನು ದೂರ ಮಾಡಲು ಶಿಕ್ಷಣದತ್ತ ದೃಷ್ಠಿಹಾಯಿಸಿದರು. ಅವರ ಧಿಮಂತ ಚಿಂತನೆಯಿಂದ ಇಂದು ನಾಡಿನಲ್ಲಿ ಸಾಮಾಜಿಕ ಸಾಮರಸ್ಯ ಮೂಡಿದೆ ಎಂದು ಪ್ರೌಢಶಿಕ್ಷಣ ಮಂಡಳಿಯ ನಿವೃತ್ತ ಕಾರ್ಯದರ್ಶಿ ಎಂ.ರೇವಣಸಿದ್ದಪ್ಪ ತಿಳಿಸಿದರು.

ಅವರು, ಭಾನುವಾರ ನಗರದ ಯಾದವರ ವಿದ್ಯಾರ್ಥಿ ನಿಯಲದಲ್ಲಿ ತಾಲ್ಲೂಕು ನಿವೃತ್ತ ಮಾದಿಗ ನೌಕರರ ಕ್ಷೇಮಾಭಿವೃದ್ಧಿ ಸಂಘದ ಉದ್ಘಾಟನೆಯನ್ನು ನೆರವೇರಿಸಿ ಮಾತನಾಡಿದರು. ಮಾದಿಗ ಸಮುದಾಯದ ಶತಮಾನಗಳ ಕಾಲ



ಶೋಷಣೆ, ಅವಮಾನದಿಂದ ಅವಸಾನದತ್ತ ಸಾಗಿತ್ತು. ಈ ಸಮುದಾಯವನ್ನು ಮೇಲೆತ್ತುವ ಯಾವುದೇ ದೃಷ್ಠಿಕೋನ ಯಾರಿಗೂ ಇರಲಿಲ್ಲ. ಇಂತಹ ಸಂದರ್ಭದಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಮಾದಿಗ ಸಮುದಾಯವೂ ಸಹ ಜಾಗೃತವಾದಲ್ಲಿ ಮಾತ್ರ ಸಮಾಜದಲ್ಲಿ ಸಾಮಾಜಿಕ ಚಿಂತನೆಗೆ ವಿಶೇಷ ಅರ್ಥಬರುತ್ತದೆ ಎಂದು ಪ್ರತಿಪಾದಿಸಿ ಅಂದಿನ ಎಲ್ಲಾ ಮುಖಂಡ ಮನವಲಿಸಿ ಮಾದಿಗ ಸಮುದಾಯವನ್ನು ಶೋಷಣೆಯಿಂದ ಮೇಲೆತ್ತುವ ಕಾರ್ಯಕ್ಕೆ ಸಂಕಲ್ಪ ಮಾಡಿದರು ಎಂದರು.

ಸಂಘ ಗೌರವಾಧ್ಯಕ್ಷ ಟಿ.ಚೌಡಪ್ಪ ಪ್ರಾಸ್ತಾವಿಕ ನುಡಿಯಲ್ಲಿ, ನಿವೃತ್ತ ಮಾದಿಗ ನೌಕರರ ಕ್ಷೇಮಾಭಿವೃದ್ಧಿ ಸಂಘ ತನ್ನದೇಯಾದ ಸಾಮಾಜಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ನಿರ್ಧರಿಸಿದೆ. ಶೋಷಣೆಯ ಕತ್ತಲಿನಿಂದ ಬೆಳಕಿನತ್ತ ಸಾಗುವ ದೃಢನಿಶ್ಚಯವನ್ನು ಮಾಡಲಾಗಿದೆ. ಶೋಷಣೆಯ ನೆರಳಲ್ಲಿರುವ ಸಮುದಾಯದ ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡುವ ಮೂಲಕ ಅವರನ್ನು ಜಾಗೃತಗೊಳಿಸಬೇಕಿದೆ. ನಿವೃತ್ತ ಮಾದಿಗ ನೌಕರರ ಕ್ಷೇಮಾಭಿವೃದ್ಧಿ ಸಂಘ ಈ ನಿಟ್ಟಿನಲ್ಲಿ ಹಲವಾರು ಕಾರ್ಯಕ್ರಮಗಳನ್ನು ಸಮುದಾಯದ ಎಲ್ಲರ ಸಹಕಾರದಿಂದ ಕೈಗೊಳ್ಳಲಿದೆ ಎಂದರು. ನಿವೃತ್ತ ಮಾದಿಗ ನೌಕರರ ಕ್ಷೇಮಾಭಿವೃದ್ಧಿ ಸಂಘದ ಸ್ಥಾಪನೆ ಕುರಿತು ಆಶಯ ನುಡಿಯನ್ನಾಡಿದ ಉಪನ್ಯಾಸಕ ಡಾ.ಬಿ.ಎಂ.ಗುರುನಾಥ, ಬದಲಾವಣೆ ಎಂಬುವುದು ನಾವು ನಿರೀಕ್ಷೆ ಮಾಡಿದಷ್ಟು ವೇಗದಲ್ಲಿ ಕಾಣಲು ಸಾಧ್ಯವಿಲ್ಲ. ಸ್ವಾತಂತ್ರ್ಯೋತ್ಸವ ಅಮೃತ ಮಹೋತ್ಸವದಲ್ಲೂ ನಾವು ಇನ್ನೂ ಶೋಷಣೆಯ ಭಯದಿಂದಲೇ ಬದುಕುತ್ತಿದ್ದೇವೆ. ಕಾರಣ, ನಮ್ಮನ್ನು ಆಳಿದ ಯಾವುದೇ ರಾಜಕೀಯ ಪಕ್ಷಗಳು ಈ ಸಮುದಾಯದ ಅಭ್ಯುದಯಕ್ಕೆ ಪ್ರಾಮಾಣಿಕ ಪ್ರಯತ್ನ ನಡೆಸಲಿಲ್ಲ. ಇದು ಸಮುದಾಯದ ಮೇಲೆ ಗಾಡವಾದ ಪರಿಣಾಮ ಬೀರಿದೆ ಎಂದರು.

ನಿವೃತ್ತ ಮುಖ್ಯೋಪಾಧ್ಯಾಯ ಟಿ.ತಿಮ್ಮಯ್ಯ, ಸಂಘದ ನೂತನ ನಾಮಫಲಕವನ್ನು ಅನಾವರಣ ಮಾಡಿದರು, ನಿವೃತ್ತ ಪ್ರಾಂಶುಪಾಲ ಬಿ.ವಿ.ಸಿರಿಯಣ್ಣ 2024ರ ಕ್ಯಾಲೆಂಡರನ್ನು ಬಿಡುಗಡೆಗೊಳಿಸಿ ನೂತನ ಸಂಘ ಸಮಾಜ ಮುಖಿ ಕಾರ್ಯಗಳಲಿ ಎಂದು ಶುಭ ಹಾರೈಸಿದರು. ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಡಿ.ಟಿ.ಜಗನ್ನಾಥ, ತಾಲ್ಲೂಕಿನಾದ್ಯಂತ ಸುಮಾರು 500ಕ್ಕೂ ಹೆಚ್ಚು ನಿವೃತ್ತ ಮಾದಿಗ ನೌಕರರು ಇದ್ದಾರೆ. ಎಲ್ಲರೂ ಸಮಾಜದ ಚಿಂತನೆ ಬಗ್ಗೆ ವಿಶ್ವಾಸವುಳ್ಳವರಾಗಿದ್ದಾರೆ. ಕ್ಷೇಮಾಭಿವೃದ್ಧಿ ಸಂಘದ ಮೂಲಕ ಕಾರ್ಯಚಟುವಟಿಕೆಗಳನ್ನು ನಡೆಸಲು ಸಿದ್ದರಿದ್ದಾರೆ. ಸಮುದಾಯದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯಲ್ಲದೆ, ಹಲವಾರು ಕಾರ್ಯಕ್ರಮಗಳ ಮೂಲಕ ಸಮುದಾಯದ ವಿದ್ಯಾರ್ಥಿಗಳಿಗೆ ಆಸರೆಯಾಗಲು ನಿರ್ಧರಿಸಿದ್ದಾರೆ. ಎಲ್ಲರ ಸಹಕಾರದಿಂದ ಈ ಪುಣ್ಯ ಕಾರ್ಯ ನಡೆಯಬೇಕಿದ್ದು ಇದಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T